**C**

**CCE PF**
**REVISED**
**FULL SYLLABUS**
**NSR & NSPR**

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,**
**ಮಲ್ಲೇಶ್ವರಂ, ಬೆಂಗಳೂರು – 560 003**

**KARNATAKA SCHOOL EXAMINATION AND ASSESSMENT BOARD,**
**MALLESHWARAM, BENGALURU – 560 003**

**ಎಸ್.ಎಸ್.ಎಲ್.ಸಿ. ಪರೀಕ್ಷೆ, ಮಾರ್ಚ್ / ಏಪ್ರಿಲ್, 2023**

**S.S.L.C. EXAMINATION, MARCH / APRIL, 2023**

# ಮಾದರಿ ಉತ್ತರಗಳು

# MODEL ANSWERS

ದಿನಾಂಕ : 31. 03. 2023 ] **ಸಂಕೇತ ಸಂಖ್ಯೆ : 01-K**

Date : 31. 03. 2023 ] **CODE NO. : 01-K**

## ವಿಷಯ : ಪ್ರಥಮ ಭಾಷೆ — ಕನ್ನಡ

## Subject : First Language — KANNADA

**(ಖಾಸಗಿ ಅಭ್ಯರ್ಥಿ / ಎನ್.ಎಸ್.ಆರ್. & ಎನ್.ಎಸ್.ಪಿ.ಆರ್.)**

**(Private Fresh / NSR & NSPR)**

**[ ಗರಿಷ್ಠ ಅಂಕಗಳು : 125**

**[ Max. Marks : 125**

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| **I.** | **ಬಹು-ಆಯ್ಕೆ ಪ್ರಶ್ನೆ (ಕ್ರಮಾಕ್ಷರದೊಂದಿಗಿನ ಪ್ರತಿ ಸರಿಯುತ್ತರಕ್ಕೆ 1 ಅಂಕ) :** | **10 × 1 = 10** |
| 1. | 'ದಿಗಂತ' ಪದವು ಈ ಸಂಧಿಗೆ ಉದಾಹರಣೆಯಾಗಿದೆ<br>(ಎ) ಗುಣ ಸಂಧಿ (ಬಿ) ಜಶ್ತ್ವ ಸಂಧಿ<br>(ಸಿ) ವೃದ್ಧಿ ಸಂಧಿ (ಡಿ) ಶ್ಚುತ್ವ ಸಂಧಿ<br>***ಉತ್ತರ :*** (ಬಿ) ಜಶ್ತ್ವ ಸಂಧಿ | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| 2. | ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಬಳಸುವ ಲೇಖನ ಚಿಹ್ನೆ<br>(ಎ) ಉದ್ಧರಣ ಚಿಹ್ನೆ (ಬಿ) ವಾಕ್ಯವೇಷ್ಟನ ಚಿಹ್ನೆ<br>(ಸಿ) ಆವರಣ ಚಿಹ್ನೆ (ಡಿ) ವಿವರಣಾತ್ಮಕ ಚಿಹ್ನೆ<br>***ಉತ್ತರ :*** (ಸಿ) ಆವರಣ ಚಿಹ್ನೆ | |
| 3. | 'ಬೆಟ್ಟದಾವರೆ' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ<br>(ಎ) ತತ್ಪುರುಷ ಸಮಾಸ (ಬಿ) ದ್ವಿಗು ಸಮಾಸ<br>(ಸಿ) ಅಂಶಿ ಸಮಾಸ (ಡಿ) ಕ್ರಿಯಾ ಸಮಾಸ<br>***ಉತ್ತರ :*** (ಎ) ತತ್ಪುರುಷ ಸಮಾಸ | |
| 4. | 'ಮಾಡು' ಧಾತುವಿನ ವಿಧ್ಯರ್ಥಕ ರೂಪ<br>(ಎ) ಮಾಡೇವು (ಬಿ) ಮಾಡಿಯಾರು<br>(ಸಿ) ಮಾಡರು (ಡಿ) ಮಾಡಲಿ<br>***ಉತ್ತರ :*** (ಡಿ) ಮಾಡಲಿ | |
| 5. | 'ಸಾವಿತ್ರಿಗೆ' ಈ ಪದದಲ್ಲಿರುವ ವಿಭಕ್ತಿ<br>(ಎ) ಪ್ರಥಮಾ (ಬಿ) ದ್ವಿತೀಯಾ<br>(ಸಿ) ತೃತೀಯಾ (ಡಿ) ಚತುರ್ಥೀ<br>***ಉತ್ತರ :*** (ಡಿ) ಚತುರ್ಥೀ | |
| 6. | 'ಧಗಧಗ' ಪದವು ಈ ಅವ್ಯಯಕ್ಕೆ ಸೇರಿದೆ<br>(ಎ) ಸಾಮಾನ್ಯಾರ್ಥಕಾವ್ಯಯ (ಬಿ) ಅನುಕರಣಾವ್ಯಯ<br>(ಸಿ) ಭಾವಸೂಚಕಾವ್ಯಯ (ಡಿ) ಕ್ರಿಯಾರ್ಥಕಾವ್ಯಯ<br>***ಉತ್ತರ :*** (ಬಿ) ಅನುಕರಣಾವ್ಯಯ | |
| 7. | 'ಚಂದ್ರನಂತೆ' ಪದವು ಈ ವ್ಯಾಕರಣಾಂಶಕ್ಕೆ ಸೇರಿದೆ<br>(ಎ) ತದ್ಧಿತಾಂತಭಾವನಾಮ (ಬಿ) ತದ್ಧಿತಾಂತಾವ್ಯಯ<br>(ಸಿ) ಕೃದಂತನಾಮ (ಡಿ) ಕೃದಂತಭಾವನಾಮ<br>***ಉತ್ತರ :*** (ಬಿ) ತದ್ಧಿತಾಂತಾವ್ಯಯ | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 8. | ಅಕರ್ಮಕ ಧಾತುವಿಗೆ ಉದಾಹರಣೆಯಿದು<br>(ಎ) ಕೊಡು (ಬಿ) ಬಿಡು<br>(ಸಿ) ತಿದ್ದು (ಡಿ) ಬದುಕು<br>***ಉತ್ತರ :*** (ಡಿ) ಬದುಕು | |
| 9. | ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅದು<br>(ಎ) ಸಾಮಾನ್ಯ ವಾಕ್ಯ (ಬಿ) ಸಂಯೋಜಿತ ವಾಕ್ಯ<br>(ಸಿ) ಮಿಶ್ರವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ<br>***ಉತ್ತರ :*** (ಸಿ) ಮಿಶ್ರವಾಕ್ಯ | |
| 10. | ಗುರು–ಲಘು ಮೂರಿರೆ ಇದು<br>(ಎ) ಮನ ಗಣ (ಬಿ) ಭಯ ಗಣ<br>(ಸಿ) ಜರ ಗಣ (ಡಿ) ಸತ ಗಣ<br>***ಉತ್ತರ :*** (ಎ) ಮನ ಗಣ | |
| **II.** | **ಸಂಬಂಧೀಪದ ಬರೆಯುವುದು (ಪ್ರತಿ ಸರಿಯುತ್ತರಕ್ಕೆ 1 ಅಂಕ) :** | **5 × 1 = 5** |
| 11. | ವರ್ಗೀಯ ವ್ಯಂಜನಾಕ್ಷರಗಳು : ಞ :: ಅವರ್ಗೀಯ ವ್ಯಂಜನಾಕ್ಷರಗಳು : ............... .<br>***ಉತ್ತರ :*** ೯ | |
| 12. | ಹಾಲ್ಜೇನು : ಜೋಡುನುಡಿ :: ಬೇಡಬೇಡ : ......................... .<br>***ಉತ್ತರ :*** ದ್ವಿರುಕ್ತಿ | |
| 13. | ಪರ್ವತ : ರೂಢನಾಮ :: ಧರ್ಮರಾಯ : ......................... .<br>***ಉತ್ತರ :*** ಅಂಕಿತನಾಮ | |
| 14. | ಮ್ಯಾಗ : ಮೇಲೆ :: ಸಕ್ಕಾರಿ : ................... .<br>***ಉತ್ತರ :*** ಸಕ್ಕರೆ | |
| 15. | ತಿನ್ನುತ್ತೇನೆ : ವರ್ತಮಾನಕಾಲ :: ತಿಂದೆನು : ......................... .<br>***ಉತ್ತರ :*** ಭೂತಕಾಲ | |
| **III.** | **ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯುವುದು.**<br>**(ವಾಕ್ಯರೂಪದಲ್ಲಿರುವ ಪ್ರತಿ ಸರಿಯುತ್ತರಕ್ಕೆ 1 ಅಂಕ) :** | **8 × 1 = 8** |
| 16. | ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು ?<br>***ಉತ್ತರ :***<br>ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಶಬರಿ. | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| 17. | ಹಿತವಚನವು ಮನಸ್ಸಿನ ಕೊಳೆಯನ್ನು ಹೇಗೆ ತೊಳೆಯುತ್ತದೆ ?<br>***ಉತ್ತರ :***<br>ಮುಸ್ಸಂಜೆಯ ಚಂದ್ರ ಕತ್ತಲನ್ನು ಕಳೆವಂತೆ ಹಿತವಚನವು ಮನಸ್ಸಿನ ಕೊಳೆಯನ್ನು ತೊಳೆಯುತ್ತದೆ. | |
| 18. | ಧರ್ಮದ ಆಚರಣೆಗಿರುವ ಪ್ರಧಾನ ಮಾರ್ಗ ಯಾವುದು ?<br>***ಉತ್ತರ :***<br>ಧರ್ಮದ ಆಚರಣೆಗಿರುವ ಪ್ರಧಾನ ಮಾರ್ಗ ಯಜ್ಞ. | |
| 19. | ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು ?<br>***ಉತ್ತರ :***<br>ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ದೇವಗುರು, ದ್ವಿಜರ ಪೂಜೆಯನ್ನು ಮಾಡುತ್ತ ಕಳೆದನು. | |
| 20. | ಹಕ್ಕಿಯ ಕಣ್ಣುಗಳು ಯಾವುವು ?<br>***ಉತ್ತರ :***<br>ಹಕ್ಕಿಯ ಕಣ್ಣುಗಳು ಸೂರ್ಯ–ಚಂದ್ರರು. | |
| 21. | ಯಜ್ಞಾಶ್ವವನ್ನು ಕಟ್ಟಿದವರು ಯಾರು ?<br>***ಉತ್ತರ :***<br>ಯಜ್ಞಾಶ್ವವನ್ನು ಕಟ್ಟಿದವರು ಲವ. | |
| 22. | ಗೋವಿಂದ ಪೈಗಳು ಬರೆದ ಮೊದಲ ಯಕ್ಷಗಾನ ಪ್ರಸಂಗದ ಹೆಸರೇನು ?<br>***ಉತ್ತರ :***<br>ಗೋವಿಂದ ಪೈಗಳು ಬರೆದ ಮೊದಲ ಯಕ್ಷಗಾನ ಪ್ರಸಂಗದ ಹೆಸರು ಮಕರಾಕ್ಷನ ಕಾಳಗ. | |
| 23. | ಮೂವರು ಕ್ರಾಂತಿಕಾರಿಗಳನ್ನು ಗಲ್ಲಿಗೇರಿಸಲು ಬ್ರಿಟಿಷರು ಕೊಟ್ಟ ಕಾರಣ ಏನು ?<br>***ಉತ್ತರ :***<br>ಮೂವರು ಕ್ರಾಂತಿಕಾರಿಗಳನ್ನು ಗಲ್ಲಿಗೇರಿಸಲು ಬ್ರಿಟಿಷರು ಕೊಟ್ಟ ಕಾರಣ 'ರಾಜದ್ರೋಹ'. | |
| **IV.** | **ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯುವುದು (ಉತ್ತರದ ಅಂಶಗಳನ್ನಾಧರಿಸಿ ಪ್ರತಿ ಸರಿ ಉತ್ತರಕ್ಕೆ 2 ಅಂಕಗಳು) :** | **15 × 2 = 30** |
| 24. | ವಿ.ಕೃ. ಗೋಕಾಕ ಅವರು ಟೊಪ್ಪಿಗೆಯ ವಿಶೇಷತೆಯನ್ನು ಹೇಗೆ ದಾಖಲಿಸಿದ್ದಾರೆ ?<br>***ಉತ್ತರ :***<br>ಲೇಖಕರಾದ ವಿ.ಕೃ. ಗೋಕಾಕ್ ಅವರು ಲಂಡನ್ ನಗರದಲ್ಲಿ ಹೆಣ್ಣು ಮಕ್ಕಳ ಟೊಪ್ಪಿಗೆಯನ್ನು ಕುತೂಹಲದಿಂದ ನೋಡುತ್ತಾರೆ. ಒಂದು | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| | ಟೊಪ್ಪಿಗೆಯಂತೆ ಇನ್ನೊಂದಿರುವುದಿಲ್ಲ. ಸಿಕ್ಕಿಸಿದ ಪುಚ್ಚವಾದರೂ ಕನಿಷ್ಠ ಪಕ್ಷಕ್ಕೆ ಬೇರೆಯಾಗಿರುತ್ತದೆ. ಕೋಟ್ಯವಧಿ ಟೊಪ್ಪಿಗೆಗಳನ್ನು ಬೇಕಾದರೆ ಪರೀಕ್ಷಿಸಿ ಇದನ್ನು ಮನಗಾಣಬಹುದು. ಮನುಷ್ಯರಂತೆ ಟೊಪ್ಪಿಗೆಯಲ್ಲವೇ? ಒಬ್ಬ ಮನುಷ್ಯಳಂತೆ ಇನ್ನೊಬ್ಬಳಿಲ್ಲ. ಹೀಗೆ ಟೊಪ್ಪಿಗೆಯ ವಿಶೇಷತೆಯನ್ನು ಲೇಖಕರು ದಾಖಲಿಸಿದ್ದಾರೆ. | |
| 25. | ಗುರೂಪದೇಶದ ಗುಣಗಳನ್ನು ಪಟ್ಟಿಮಾಡಿ. | |
| | ***ಉತ್ತರ :*** | |
| | ಗುರೂಪದೇಶ ಎಂದರೆ ಜನರ ಒಳ ಹೊರಗಣ ಕೊಳೆಗಳನ್ನು ತೊಳೆದು ಬಿಡುವ ನೀರಿಲ್ಲದ 'ಮೀಹ' ತಲೆ ನೆರೆಯದೆ, ಮೈಸುಕ್ಕುಗಟ್ಟದೆ ಮೂಡುವ ಮುಪ್ಪು; ಬೊಜ್ಜು ಬೆಳೆಯದೆ ಬರುವ ಗುರುತ್ವ; ಬಂಗಾರವಿಲ್ಲದೆ ಮಾಡಿದ ಬೆಲೆ ಬಾಳುವ ಕಿವಿಯೋಲೆ; ಪಂಜು ಇಲ್ಲದೆ ಬೆಳಗುವ ಬೆಳಕು; ಉದ್ವೇಗ ಬರಿಸದ ಜಾಗರಣೆ. ಇವುಗಳು ಗುರೂಪದೇಶದ ಗುಣಗಳಾಗಿವೆ. | |
| 26. | ಧ್ವಜವನ್ನೇ ನಮ್ಮ ಗುರುವೆಂದು ಸ್ವೀಕರಿಸಿದ್ದೇವೆ ಎಂದು ಲೇಖಕರು ಹೇಳಲು ಕಾರಣವೇನು ? | |
| | ***ಉತ್ತರ :*** | |
| | ನಾವು ಯಾವುದೇ ವ್ಯಕ್ತಿಯನ್ನು ಪೂಜಿಸುವುದಿಲ್ಲ. ಏಕೆಂದರೆ ಯಾರೇ ಆಗಲಿ ಅವರು ತಮ್ಮ ಮಾರ್ಗದಲ್ಲಿ ಅಚಲರಾಗಿಯೇ ಇರುತ್ತಾರೆ ಎಂಬ ಭರವಸೆ ಇರುವುದಿಲ್ಲ. ಕೇವಲ ತತ್ತ್ವ ಒಂದೇ ಆ ಅಚಲ ಪದವಿಯಲ್ಲಿ ಇರಬಲ್ಲದು. ಇದನ್ನು ಧ್ವಜವು ಸಾಂಕೇತಿಸುತ್ತದೆ. ಯಾವ ಧ್ವಜವನ್ನು ನೋಡಿದೊಡನೆ ನಮ್ಮ ರಾಷ್ಟ್ರದ ಸಮಸ್ತ ಇತಿಹಾಸ, ಸಂಸ್ಕೃತಿ ಹಾಗೂ ಪರಂಪರೆಗಳು ನಮ್ಮ ಕಣ್ಣಿಗೆ ಕಟ್ಟುತ್ತವೆಯೋ, ಯಾವುದನ್ನು ಕಂಡ ಕೂಡಲೇ ಹೃದಯದ ಭಾವನೆಗಳು ಉಕ್ಕಿ ಬರುತ್ತವೆಯೋ, ಹೃದಯದಲ್ಲಿ ಅಪೂರ್ವ ಸ್ಫೂರ್ತಿಯ ಸಂಚಾರವಾಗುತ್ತದೆ. ಅಂತಹ ಧ್ವಜವನ್ನೇ ಗುರುವೆಂದು ಭಾವಿಸಿ ಗುರುಪೂರ್ಣಿಮಾ ದಿನದಂದು ಪೂಜಿಸುತ್ತೇವೆ. ಹೀಗಾಗಿ ಧ್ವಜವನ್ನೇ ಗುರುವೆಂದು ಸ್ವೀಕರಿಸಿದ್ದೇವೆ ಎಂದು ಲೇಖಕರು ಹೇಳಿದ್ದಾರೆ. | |
| 27. | ವ್ಯಕ್ತಿಗಳನ್ನು ಆದರ್ಶವಾಗಿ ಸ್ವೀಕರಿಸಲು ಇರುವ ತೊಡಕುಗಳಾವುವು ? | |
| | ***ಉತ್ತರ :*** | |
| | ನಾವು ಯಾರನ್ನು ಸದ್ಗುಣಗಳ ಸಾಕಾರ ಸ್ವರೂಪನೆಂದೂ, ಸರ್ವಥಾ ಪ್ರಮಾದಾತೀತನೆಂದೂ ಭಾವಿಸುವೆವೋ ಆ ವ್ಯಕ್ತಿಯೇ ನಮ್ಮ ಆದರ್ಶವಾಗಬೇಕು. | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ಆದರ್ಶವೆಂದು ಭಾವಿಸಲ್ಪಟ್ಟ ವ್ಯಕ್ತಿಯಲ್ಲಿ ಎಲ್ಲಾ ಗುಣಗಳೂ ಎದ್ದು ಕಾಣಬೇಕು. ಆ ವ್ಯಕ್ತಿಯಿಂದ ಏನಾದರೂ ತಪ್ಪಾದರೆ ನಾವು ಬೇರೊಬ್ಬನನ್ನು ಹುಡುಕಬೇಕಾಗುತ್ತದೆ. ಅವನಲ್ಲಿಯೂ ದೋಷ ಕಂಡುಬಂದರೆ, ಅವನ ಬಗ್ಗೆ ಇರುವ ಶ್ರದ್ಧೆ ಹಾರಿಹೋಗುತ್ತದೆ. ಆಗ ಮತ್ತೊಬ್ಬ ವ್ಯಕ್ತಿಯನ್ನು ಹುಡುಕಬೇಕಾಗುತ್ತದೆ. ಹೀಗೆ ನಿತ್ಯವೂ ಹೊಸ ಹೊಸ ವ್ಯಕ್ತಿಯನ್ನು ಆದರ್ಶಕ್ಕಾಗಿ ಹುಡುಕುತ್ತ ಹೊರಡಬೇಕಾಗುತ್ತದೆ. ಇವು ವ್ಯಕ್ತಿಗಳನ್ನು ಆದರ್ಶವಾಗಿ ಸ್ವೀಕರಿಸಲು ಇರುವ ತೊಡಕುಗಳಾಗಿವೆ. | |
| 28. | ವಚನಕಾರರ ದೃಷ್ಟಿಯಲ್ಲಿ ಅರಿವು ಎಂದರೇನು ? ವಿವರಿಸಿ.<br>***ಉತ್ತರ :***<br>ವಚನಕಾರರ ದೃಷ್ಟಿಯಲ್ಲಿ ಅರಿವು ಅಂದರೆ ತನ್ನಷ್ಟಕ್ಕೆ ತಾನು ಇರುವ ಕೇವಲ ತಿಳಿವಳಿಕೆ, ಜ್ಞಾನ ಮಾತ್ರ ಅಲ್ಲ; ಅದು ಕ್ರಿಯೆಯ ಅನುಭವದಿಂದ ಒಡಮೂಡುವುದು. ಅದು ಕೇಳಿ ತಿಳಿದಿದ್ದಲ್ಲ. ಕ್ರಿಯೆಯಲ್ಲಿ ಮೂಡಿದ ತಿಳಿವಳಿಕೆ, ಅದು ತರ್ಕವಲ್ಲ. ನಡೆಯಿಂದ ನುಡಿ ಹುಟ್ಟಿದರೆ ಅದು ಅರಿವು ಎಂದು ಹೇಳಿದ್ದಾರೆ. | |
| 29. | ಮನುಷ್ಯನು ತನ್ನ ಒಳಿತನ್ನು ಹೇಗೆ ಸಾಧಿಸಬಹುದು ?<br>***ಉತ್ತರ :***<br>ಮಾನವನು ತನ್ನ ಜೀವನದಲ್ಲಿ 'ಇಷ್ಟ' ಮತ್ತು 'ಪೂರ್ತ' ಎಂಬ ಎರಡು ಬಗೆಯ ವಿಧಾನಗಳ ಮೂಲಕ ಒಳಿತನ್ನು ಸಾಧಿಸಬಹುದು ಎಂದು ವೇದಗಳಲ್ಲಿ ಉಲ್ಲೇಖಿಸಲಾಗಿದೆ. 'ಇಷ್ಟ' ಎಂಬುದು ಸಾಮಾನ್ಯವಾದ ಯಜ್ಞವನ್ನು ಸಂಕೇತಿಸಿದರೆ 'ಪೂರ್ತ' ಎಂಬುದು ಕೆರೆ-ಬಾವಿಗಳ ಕಟ್ಟಿಸುವಿಕೆ, ಮರ-ಗಿಡಗಳ ನೆಡುವಿಕೆ, ದೀನ-ದಲಿತರಿಗೆ ನೆರವು, ಮಂಟಪ-ಧರ್ಮಸತ್ರಗಳ ನಿರ್ಮಾಣ, ಕವಿ-ಕಲಾವಿದರ ಪೋಷಣೆ ಮುಂತಾದ ಲೋಕೋಪಕಾರವನ್ನು ಸಂಕೇತಿಸುತ್ತದೆ. ಹೀಗೆ ಮನುಷ್ಯನು ತನ್ನ ಒಳಿತನ್ನು ಸಾಧಿಸಬಹುದಾಗಿದೆ. | |
| 30. | ನಾಳಿನ ಕನಸನ್ನು ಬಿತ್ತಬೇಕಾದರೆ ನಾವು ಹೇಗೆ ಬದುಕಬೇಕು ?<br>***ಉತ್ತರ :***<br>ಪ್ರತಿಯೊಂದು ಮತ-ಧರ್ಮಗಳು ನಮಗೆ ಸನ್ಮಾರ್ಗವನ್ನು ತೋರುವ ಪಥಗಳು ಎಂಬುದನ್ನು ಅರಿತು ಎಚ್ಚರದಲ್ಲಿ ಬದುಕಬೇಕು. ಭಯ-ಸಂಶಯಗಳಿಂದ ಕೂಡಿದ ಕಣ್ಣುಗಳಲ್ಲಿ ನಾಳಿನ ಕನಸುಗಳನ್ನು ಬಿತ್ತುವುದರ ಮೂಲಕ ಅವರಲ್ಲಿ ನವಚೈತನ್ಯವನ್ನು ತುಂಬಬೇಕು. | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| 31. | ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು ?<br>***ಉತ್ತರ :***<br>ವ್ಯಾಪಾರಕ್ಕಾಗಿ ಭಾರತಕ್ಕೆ ಬಂದ ಬ್ರಿಟಿಷರು ೧೮೫೭ ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಅನಂತರ ನಿಶ್ಶಸ್ತ್ರೀಕರಣ ಕಾಯ್ದೆಯನ್ನು ಜಾರಿಗೆ ತಂದರು. ಈ ಕಾಯ್ದೆಯನ್ನು ವಿರೋಧಿಸಿ ಹಲಗಲಿ ಬೇಡರು ಪೂಜೇರಿ ಹನುಮಾ, ಬ್ಯಾಡರ ಬಾಲ, ಜಡಗ, ರಾಮ ಮೊದಲಾದ ವೀರರ ನಾಯಕತ್ವದಲ್ಲಿ ಸಭೆ ಸೇರಿ ತಮ್ಮ ಜೀವನಾಧಾರವಾಗಿದ್ದ ಆಯುಧಗಳನ್ನು ಕೊಡಲೊಪ್ಪದೇ ಕುಂಪಣಿ ಸರ್ಕಾರದ ವಿರುದ್ಧ ದಂಗೆ ಎದ್ದರು. | |
| 32. | ತಾನು ಹೋರಾಡುತ್ತಿರುವುದು ನೆಲಕ್ಕಲ್ಲ ಛಲಕ್ಕೆ ಎಂಬುದನ್ನು ದುರ್ಯೋಧನ ಹೇಗೆ ವಿವರಿಸಿದ್ದಾನೆ ?<br>***ಉತ್ತರ :***<br>ದುರ್ಯೋಧನನು ಭೀಷ್ಮರ ಸಲಹೆಯನ್ನು ಪಡೆಯಲು ಬಂದಾಗ ಭೀಷ್ಮರು ಪಾಂಡವರೊಂದಿಗೆ ಸಂಧಿಯನ್ನು ಮಾಡಿಕೊಳ್ಳಲು ಹೇಳಿದಾಗ ದುರ್ಯೋಧನನು ನಾನು ನಿಮಗೆ ನಮಸ್ಕರಿಸಿ, ಆಶೀರ್ವಾದ ಪಡೆಯಲು ಬಂದಿದ್ದೇನೆಯೇ ಹೊರತು ಸಂಧಿ ಮಾಡಿಸಿ ಎಂದು ಕೇಳಲು ಬಂದಿಲ್ಲ ಎನ್ನುತ್ತ "ನಾನು ನೆಲಕ್ಕಾಗಿ ಹೋರಾಡುತ್ತಿಲ್ಲ ಛಲಕ್ಕಾಗಿ ಪಾಂಡವರೊಂದಿಗೆ ಹೋರಾಡುತ್ತೇನೆ. ಕರ್ಣನನ್ನು ಕೊಲ್ಲಿಸಿದ ಈ ಭೂಮಿ ಪಾಳು ಭೂಮಿ. ಇಂತಹ ನೆಲದಲ್ಲಿ ಮತ್ತೆ ಬದುಕಲು ಸಾಧ್ಯವಿಲ್ಲ" ಎಂದು ಹೇಳುವುದರ ಮೂಲಕ ತಾನು ಹೋರಾಡುತ್ತಿರುವುದು ನೆಲಕ್ಕಲ್ಲ ಛಲಕ್ಕೆ ಎಂಬುದನ್ನು ವಿವರಿಸಿದ್ದಾನೆ. | |
| 33. | ಪಾರ್ಥ-ಭೀಮರ ಬಗೆಗೆ ದುರ್ಯೋಧನನ ಅಭಿಪ್ರಾಯವೇನು ?<br>***ಉತ್ತರ :***<br>ನನ್ನ ಪ್ರಿಯ ಗೆಳೆಯನಾದ ಕರ್ಣ, ನನ್ನ ಪ್ರೀತಿಯ ತಮ್ಮ ದುಶ್ಶಾಸನನನ್ನು ಕೊಂದ ಪಾರ್ಥ-ಭೀಮರು ಇರುವ ತನಕ, ನನ್ನ ದೇಹದಲ್ಲಿ ನನ್ನ ಪ್ರಾಣ ಇರುವ ತನಕ ಸಂಧಿಯನ್ನು ಮಾಡಿಕೊಳ್ಳುವುದಿಲ್ಲ. ಮೊದಲು ಆ ಇಬ್ಬರನ್ನು ಕೊಂದು ನನ್ನ ದುಃಖ ಆರಿದ ಮೇಲೆ ಪ್ರಸಿದ್ಧನಾದ ಧರ್ಮರಾಯನೊಡನೆ ಸಂಧಿ ಮಾಡಿಕೊಳ್ಳುತ್ತೇನೆ ಎಂದು ಪಾರ್ಥ-ಭೀಮರ ಬಗೆಗೆ ತನ್ನ ಅಭಿಪ್ರಾಯವನ್ನು ತಿಳಿಸುತ್ತಾನೆ. | |
| 34. | ಕುದುರೆಯನ್ನು ಕಟ್ಟುವ ವಿಚಾರದಲ್ಲಿ ಮುನಿಸುತರಿಗೂ ಲವನಿಗೂ ನಡೆದ ಸಂವಾದವನ್ನು ಬರೆಯಿರಿ.<br>***ಉತ್ತರ :***<br>ಶ್ರೀರಾಮನ ಅಶ್ವಮೇಧ ಯಾಗದ ಕುದುರೆಯನ್ನು ಲವನು ತನ್ನ ಉತ್ತರೀಯದಿಂದ ಬಾಳೆಗಿಡಕ್ಕೆ ಕಟ್ಟಿ ಹಾಕಿದನು. ಆಗ ಮುನಿಸುತರು | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ಹೆದರಿ ಬೇಡಬೇಡ ಕುದುರೆಯನ್ನು ಬಿಟ್ಟುಬಿಡು. ಇಲ್ಲದಿದ್ದರೆ ಅರಸರ ಕಡೆಯವರು ಬಂದು ನಮಗೆ ಹೊಡೆಯುವರು ಎಂದಾಗ ಲವನು ನೀವು ಬ್ರಾಹ್ಮಣರ ಮಕ್ಕಳು ಹೆದರುತ್ತೀರಿ, ನಾನು ಜಾನಕಿಯ ಮಗ ನಾನೇಕೆ ಹೆದರಲಿ ಎಂದು ಹೇಳಿ, ನೀವಿನ್ನು ಹೊರಡಿ ಎನ್ನುತ್ತಾ ಶೌರ್ಯದಿಂದ ಬಿಲ್ಲನು ಜೇಗೈದು ನಿಂತನು. ಹೀಗೆ ಕುದುರೆಯನ್ನು ಕಟ್ಟುವ ವಿಚಾರದಲ್ಲಿ ಮುನಿಸುತರಿಗೂ ಲವನಿಗೂ ಸಂವಾದ ನಡೆಯಿತು. | |
| 35. | ಬಾಳಿನಲ್ಲಿ ತೃಪ್ತಿ ದೊರಕಬೇಕಾದರೆ ಏನು ಮಾಡಬೇಕೆಂಬುದು ವಿವೇಕಾನಂದರ ಅಭಿಪ್ರಾಯವಾಗಿದೆ ?<br>***ಉತ್ತರ :***<br>ದೇಶದ ಮತ್ತು ಇಡಿಯ ಜಗತ್ತಿನ ಕಲ್ಯಾಣ ನಿಮ್ಮ ಮೇಲೆ ನಿಂತಿದೆ ಎಂದು ಭಾವಿಸಿ ಕಾರ್ಯೋನ್ಮುಖರಾಗಬೇಕು. ವೇದಾಂತದ ಸಂದೇಶವನ್ನು ಪ್ರತಿ ಮನೆಗೂ ಸಾರಿ, ಪ್ರತಿಯೊಂದು ಆತ್ಮದಲ್ಲಿರುವ ಸುಪ್ತ ಪಾವಿತ್ರ್ಯವನ್ನು ಜಾಗೃತಗೊಳಿಸಬೇಕು. ಅನಂತರ ನೀವು ಎಷ್ಟೇ ಅಲ್ಪವನ್ನು ಸಾಧಿಸಿದ್ದರೂ ನೀವು ಒಂದು ಮಹಾ ಆದರ್ಶಕ್ಕಾಗಿ ಬಾಳಿ ದುಡಿದಿರಿ ಎಂಬ ತೃಪ್ತಿ ದೊರಕುತ್ತದೆ ಎಂಬುದು ವಿವೇಕಾನಂದರ ಅಭಿಪ್ರಾಯವಾಗಿದೆ. | |
| 36. | ಭಗತ್‌ಸಿಂಗ್ ತನ್ನ ಸಹಚರರೊಂದಿಗೆ ವೀರಯೋಧನಾಗಿ ಹೇಗೆ ಅಮರನಾದನು ?<br>***ಉತ್ತರ :***<br>ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ಮರಣ ದಂಡನೆಗೆ ಈಡಾಗಿ ತನ್ನ ಸಹಚರರಾದ ಸುಖ್‌ದೇವ್, ರಾಜ್‌ಗುರು, ಭಟುಕೇಶ್ವರ ದತ್ತರೊಂದಿಗೆ ಹಸನ್ಮುಖಿಯಾಗಿ ತಾಯಿ ಭಾರತಾಂಬೆಯ ಸ್ವಾತಂತ್ರ್ಯದ ಹಣತೆಗೆ ತೈಲವೆಂಬಂತೆ ವೀರಯೋಧನಾಗಿ ಅಮರನಾದನು. | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 37. | ‘ವಸಂತ ಮುಖ ತೋರಲಿಲ್ಲ’ ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ ? | |
| | ***ಉತ್ತರ :*** | |
| | ಒಡೆಯನ ಮನೆಯ ಅಂಗಳದಲ್ಲಿದ್ದ ಮಾವಿನ ಮರಗಳು ಮೈತುಂಬಿ ನಿಂತಿವೆ. ಆಕಾಶದಲ್ಲಿ ಹಕ್ಕಿಗಳು ರೆಕ್ಕೆ ಬಿಚ್ಚಿ ಸ್ವಚ್ಛಂದವಾಗಿ ಹಾರಾಡುತ್ತಿವೆ. ಕೋಗಿಲೆಗಳು ಮನದುಂಬಿ ಹಾಡುತ್ತಿವೆ. ಕಡಲು ಉಕ್ಕಿ ಹರಿಯುತ್ತಿದೆ. ವಸಂತನ ಆಗಮನದ ಹಿನ್ನೆಲೆಯಲ್ಲಿ ಇಳೆಯು ಸಂಭ್ರಮಿಸುತ್ತಿದೆ. ಹೀಗೆ ‘ವಸಂತ ಮುಖ ತೋರಲಿಲ್ಲ’ ಕವನದಲ್ಲಿ ಪ್ರಕೃತಿಯ ಸಂಭ್ರಮ ವ್ಯಕ್ತವಾಗಿದೆ. | |
| 38. | ಮಲೆನಾಡಿನಲ್ಲಿ ದೀಪದ ಬತ್ತಿಯ ಸಮಸ್ಯೆಯನ್ನು ಹೇಗೆ ಪರಿಹರಿಸಿಕೊಳ್ಳಲಾಯಿತು ? | |
| | ***ಉತ್ತರ :*** | |
| | ಪಶ್ಚಿಮ ಘಟ್ಟದ ಕಾಡುಗಳಲ್ಲಿ ತೊಡಕಲು ಕುಡಿ ಎಂಬ ಬೂದು ಬಣ್ಣದ ಗಿಡದ ಎಳೆಯ ಕುಡಿಯನ್ನು ಸಂಗ್ರಹಿಸಿ, ಒಣಗಿಸಿ ಡಬ್ಬದಲ್ಲಿ ಶೇಖರಿಸಿ ನಂತರ ಎಣ್ಣೆಯಲ್ಲಿ ಅದ್ದಿದಾಗ ಹತ್ತಿಯಂತೆ ಹೀರಿಕೊಂಡು ದೀಪ ಉರಿಯಲು ಸಹಾಯಕವಾಗುತ್ತಿತ್ತು. ಇದನ್ನು ನಿತ್ಯ ಆರತಿಗೆ ಬಳಸುತ್ತಿದ್ದರು. ನಾಗಸಂಪಿಗೆ ಮರದ ಬೀಜಗಳನ್ನು ಕುಟ್ಟಿ ಚಿಕ್ಕ ಚಿಕ್ಕ ಉಂಡೆಗಳನ್ನಾಗಿ ಮಾಡಿ ದೀಪಾವಳಿ, ಕಾರ್ತೀಕ ಮಾಸದಲ್ಲಿ ಉರಿಸುತ್ತಿದ್ದರು. ಜವಾರಿ ಹತ್ತಿ ಗಿಡಗಳು ಬಿಡುತ್ತಿದ್ದ ಹತ್ತಿಯನ್ನು ದೀಪಕ್ಕೆ ಬಳಸುವ ಪರಿಪಾಠವಿತ್ತು. ಹೀಗೆ ಮಲೆನಾಡಿನಲ್ಲಿ ದೀಪದ ಬತ್ತಿಯ ಸಮಸ್ಯೆಯನ್ನು ಪರಿಹರಿಸಿ ಕೊಳ್ಳಲಾಯಿತು. | |
| **V.** | **ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯುವುದು :** | **4 × 3 = 12** |
| | ಜನ್ಮಸ್ಥಳ, ಕಾಲ | 1 ಅಂಕ |
| | ಕೃತಿ, ಬಿರುದು / ಪ್ರಶಸ್ತಿ | 1 ಅಂಕ |
| | ವಾಕ್ಯರೂಪದಲ್ಲಿ ಬರೆಯುವುದು, ಭಾಷಾಶೈಲಿಗೆ | 1 ಅಂಕ |
| | ಒಟ್ಟು | 3 ಅಂಕಗಳು |
| 39. | *ವಿದ್ಯಾವಾಚಸ್ಪತಿ ಡಾ. ಬನ್ನಂಜೆ ಗೋವಿಂದಾಚಾರ್ಯ :* | |
| | ***ಉತ್ತರ :*** | |
| | ವಿದ್ವಾಂಸರಾದ ಡಾ. ಬನ್ನಂಜೆ ಗೋವಿಂದಾಚಾರ್ಯ ಅವರು | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ಉಡುಪಿಯಲ್ಲಿ ೧೯೩೬ ರ ಆಗಸ್ಟ್ ೩ ರಂದು ಜನಿಸಿದರು. ತಂದೆ ಪಡುಮನ್ನೂರು ನಾರಾಯಣ ಆಚಾರ್ಯ. ಮೂರು ದಶಕಗಳ ಕಾಲ ಪತ್ರಕರ್ತರಾಗಿ ಕೆಲಸ ಮಾಡಿದ ಇವರು ಕರ್ನಾಟಕ ಕಂಡ ಬಹುದೊಡ್ಡ ಸಂಸ್ಕೃತ-ಕನ್ನಡ ವಿದ್ವಾಂಸರು. ಸಂಸ್ಕೃತದಲ್ಲಿ ೩೦, 'ಕಾದಂಬರಿ' ಕೃತಿ ಸೇರಿ ಒಟ್ಟು ೧೩೦ ಕೃತಿಗಳನ್ನು ಕನ್ನಡದಲ್ಲಿ ರಚಿಸಿದ್ದಾರೆ. ವೇದೋಪನಿಷತ್ತುಗಳು, ರಾಮಾಯಣ ಹಾಗೂ ಮಹಾಭಾರತ ಮಹಾಕಾವ್ಯಗಳನ್ನು ಕುರಿತು ೩೦೦೦೦ ಗಂಟೆಗಳಷ್ಟು ಉಪನ್ಯಾಸ ನೀಡಿದ್ದಾರೆ. ವಿದ್ಯಾವಾಚಸ್ಪತಿ ಎಂಬುದು ಅವರ ಪಾಂಡಿತ್ಯಕ್ಕೆ ಸಂದ ಬಿರುದು. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಮಂಗಳೂರು ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಇವರಿಗೆ ಸಂಧಿವೆ. ಇವರು ಅಖಿಲ ಭಾರತ ಸಂಸ್ಕೃತ ಸಮ್ಮೇಳನದ ಅಧ್ಯಕ್ಷರಾಗಿದ್ದರು. ಇವರಿಗೆ ಭಾರತ ಸರ್ಕಾರದ ಪದ್ಮಶ್ರೀ ಪ್ರಶಸ್ತಿಯನ್ನಿತ್ತು ಗೌರವಿಸಿದೆ. 'ಭಗವಂತನ ನಲ್ನುಡಿ, ಮುಗಿಲ ಮಾತು, ಹೇಳದೆ ಉಳಿದದ್ದು, ನೆನಪಾದಳು ಶಕುಂತಲೆ, ಮತ್ತೆ ರಾಮನ ಕತೆ, ಮಹಾಶ್ವೇತೆ, ಆವೆಯ ಮಣ್ಣಿನ ಆಟದ ಬಂಡಿ, ಋತುಗಳ ಹೆಣಿಗೆ' - ಇವು ಇವರ ಕೃತಿಗಳಾಗಿವೆ. | |
| 40. | *ದೇವನೂರ ಮಹಾದೇವ :*<br><br>***ಉತ್ತರ :***<br><br>ಬಂಡಾಯ ಮತ್ತು ದಲಿತ ಸಾಹಿತ್ಯದ ಪ್ರಮುಖರಲ್ಲಿ ಒಬ್ಬರಾದ ದೇವನೂರ ಮಹಾದೇವ ಸಾ.ಶ. ೧೯೪೮ ರಲ್ಲಿ ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ದೇವನೂರಿನಲ್ಲಿ ಜನಿಸಿದರು. ಮೈಸೂರಿನ ಭಾರತೀಯ ಭಾಷಾಸಂಸ್ಥಾನದಲ್ಲಿ ಅಧ್ಯಾಪಕರಾಗಿ ಸೇವೆ ಸಲ್ಲಿಸಿದ ಇವರು 'ದ್ಯಾವನೂರು, ಒಡಲಾಳ, ಗಾಂಧಿ ಮತ್ತು ಮಾವೊ, ನಂಬಿಕೆಯನೆಂಟ, ನೋಡು ಮತ್ತು ಕೂಡು, ಎದೆಗೆ ಬಿದ್ದ ಅಕ್ಷರ' ಮೊದಲಾದ ಕೃತಿಗಳನ್ನು | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ರಚಿಸಿದ್ದಾರೆ. ಶ್ರೀಯುತರ 'ಕುಸುಮಬಾಲೆ' ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, 'ಒಡಲಾಳ' ಕೃತಿಗೆ ಭಾರತೀಯ ಭಾಷಾ ಪರಿಷತ್ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗಳು ಲಭಿಸಿವೆ. | |
| 41. | *ಜಿ.ಎಸ್. ಶಿವರುದ್ರಪ್ಪ :* | |
| | ***ಉತ್ತರ :*** | |
| | ಆಧುನಿಕ ಕನ್ನಡದ ಪ್ರಮುಖ ಕವಿಗಳಲ್ಲಿ ಒಬ್ಬರಾದ ಜಿ.ಎಸ್. ಶಿವರುದ್ರಪ್ಪ ಎಂದೇ ಪ್ರಸಿದ್ಧರಾಗಿರುವ ಗುಗ್ಗರಿ ಶಾಂತವೀರಪ್ಪ ಶಿವರುದ್ರಪ್ಪ ಇವರು ಸಾ.ಶ. ೧೯೨೬ ರಲ್ಲಿ ಶಿವಮೊಗ್ಗ ಜಿಲ್ಲೆಯ ಶಿಕಾರಿಪುರದಲ್ಲಿ ಜನಿಸಿದರು. ಮೈಸೂರು, ಉಸ್ಮಾನಿಯಾ ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕನ್ನಡ ಪ್ರಾಧ್ಯಾಪಕರಾಗಿ, ಕನ್ನಡ ಅಧ್ಯಯನ ಕೇಂದ್ರದ ನಿರ್ದೇಶಕರಾಗಿ ಸೇವೆ ಸಲ್ಲಿಸಿರುವ ಇವರು 'ಸಾಮಗಾನ, ಚೆಲುವು-ಒಲವು, ದೇವಶಿಲ್ಪ, ದೀಪದ ಹೆಜ್ಜೆ, ಅನಾವರಣ, ವಿಮರ್ಶೆಯ ಪೂರ್ವಪಶ್ಚಿಮ, ಮಾಸ್ಕೊದಲ್ಲಿ ಇಪ್ಪತ್ತೆರಡು ದಿನಗಳು, ಸೌಂದರ್ಯ ಸಮೀಕ್ಷೆ, ಎದೆತುಂಬಿ ಹಾಡಿದೆನು' ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ಶ್ರೀಯುತರ 'ಕಾವ್ಯಾರ್ಥಚಿಂತನ' ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದೆ. ಹಂಪಿ ಕನ್ನಡ ವಿಶ್ವವಿದ್ಯಾನಿಲಯದ 'ನಾಡೋಜ' ಪುರಸ್ಕಾರ, ಬೆಂಗಳೂರು ಮತ್ತು ಕುವೆಂಪು ವಿಶ್ವವಿದ್ಯಾನಿಲಯಗಳ ಗೌರವ ಡಿ.ಲಿಟ್. ಪದವಿ, ಪಂಪ ಪ್ರಶಸ್ತಿ ಮತ್ತು ರಾಷ್ಟ್ರಕವಿ ಅಭಿಧಾನಕ್ಕೆ ಭಾಜನರಾಗಿರುವ ಇವರು ೧೯೯೨ ರಲ್ಲಿ ದಾವಣಗೆರೆಯಲ್ಲಿ ಸಮಾವೇಶಗೊಂಡ ೬೧ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು. | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| 42. | *ಪಂಪ :* | |
| | ***ಉತ್ತರ :*** | |
| | ಮಹಾಕವಿ ಪಂಪ ಸಾ.ಶ. ೯೦೨ ರಲ್ಲಿ ವೆಂಗಿಮಂಡಲದ ವೆಂಗಿಪಳು ಎಂಬ ಅಗ್ರಹಾರದಲ್ಲಿ ಜನಿಸಿದನು. ಕೃಷ್ಣಾ ಮತ್ತು ಗೋದಾವರಿ ನದಿಗಳ ನಡುವಿನ ಸ್ಥಳವಾದ ವೆಂಗಿಪಳು ನಿಸರ್ಗ ಸೌಂದರ್ಯದ ತಾಣ. ಚಾಲುಕ್ಯರ ಅರಿಕೇಸರಿಯ ಆಸ್ಥಾನಕವಿಯಾಗಿದ್ದ ಪಂಪ 'ಆದಿಪುರಾಣ ಮತ್ತು ವಿಕ್ರಮಾರ್ಜುನ ವಿಜಯಂ' ಎಂಬ ಮಹಾಕಾವ್ಯಗಳ ಕರ್ತೃ ವಿಕ್ರಮಾರ್ಜುನ ವಿಜಯಂ ಕಾವ್ಯಕ್ಕೆ ಪಂಪಭಾರತ ಎಂಬ ಮತ್ತೊಂದು ಹೆಸರಿದೆ. ಕಲಿಯೂ ಕವಿಯೂ ಆಗಿದ್ದ ಪಂಪ ರತ್ನತ್ರಯರಲ್ಲಿ ಒಬ್ಬ. ಸರಸ್ವತೀ ಮಣಿಹಾರ, ಸಂಸಾರ ಸಾರೋದಯ, ಕವಿತಾಗುಣಾರ್ಣವ ಎಂಬ ಬಿರುದುಗಳನ್ನು ಪಡೆದಿದ್ದನು. | |
| **VI.** | **ಪ್ರಸ್ತಾರ ಹಾಕಿ, ಗಣ ವಿಭಾಗಿಸಿ, ಛಂದಸ್ಸನ್ನು ಹೆಸರಿಸುವುದು :** | **1 × 3 = 3** |
| | ಪ್ರಸ್ತಾರ ಹಾಕುವುದು | 1 ಅಂಕ |
| | ಗಣ ವಿಭಾಗಿಸುವುದು | 1 ಅಂಕ |
| | ಛಂದಸ್ಸಿನ ಹೆಸರು ಬರೆಯುವುದು | 1 ಅಂಕ |
| | ಒಟ್ಟು | 3 ಅಂಕಗಳು |
| 43. | ಅತಿಕುಟಿಲಮನಂ ಧನಲು<br>ಬ್ಧತೆಯಿಂದಂ ದುಷ್ಟಬುದ್ಧಿ ನುಡಿದಂ ಪುಸಿಯಂ<br>U U U U \| U U — \| U U — \|<br>ಅತಿಕುಟಿ \| ಲಮನಂ \| ಧನಲು \| = ೧೨ ಮಾತ್ರೆಗಳು<br>U U — \| — — \| U — U \| U U — \| U U — \|<br>ಬ್ಧತೆಯಿಂ \| ದಂ ದು \| ಷ್ಟಬುದ್ಧಿ \| ನುಡಿದಂ \| ಪುಸಿಯಂ \| = ೨೦ ಮಾತ್ರೆಗಳು<br>ಛಂದಸ್ಸು : ಇದು ಮಾತ್ರಾಗಣಾಧಾರಿತ 'ಕಂದ ಪದ್ಯ'ದ ಲಕ್ಷ್ಯವಾಗಿದೆ. | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| **VII.** | **ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯ ಮಾಡುವುದು :** | **1 × 3 = 3** |
| | ಅಲಂಕಾರವನ್ನು ಹೆಸರಿಸುವುದು | 1 ಅಂಕ |
| | ಲಕ್ಷಣ ಬರೆಯುವುದು | 1 ಅಂಕ |
| | ಅಂಶಗಳನ್ನು ಗುರುತಿಸಿ, ಸಮನ್ವಯಿಸುವುದು | 1 ಅಂಕ |
| | ಒಟ್ಟು | 3 ಅಂಕಗಳು |
| 44. | "ಬಾನಿನಲ್ಲಿ ಗಾಳಿಪಟಗಳು ಹಕ್ಕಿಗಳಂತೆ ಹಾರಾಡುತ್ತಿದ್ದವು"<br>***ಉತ್ತರ :***<br>ಅಲಂಕಾರದ ಹೆಸರು : ಉಪಮಾಲಂಕಾರ<br>ಲಕ್ಷಣ : ಎರಡು ವಸ್ತುಗಳಿಗೆ ಪರಸ್ಪರವಾಗಿ ಇರುವ ಹೋಲಿಕೆಯನ್ನು ಹೇಳುವುದೇ ಉಪಮಾಲಂಕಾರ.<br>*ಸಮನ್ವಯ :* *ಉಪಮೇಯ :* ಬಾನಿನಲ್ಲಿನ ಗಾಳಿಪಟಗಳು<br>*ಉಪಮಾನ :* ಹಕ್ಕಿಗಳು<br>*ಉಪಮಾವಾಚಕ ಪದ :* ಅಂತೆ<br>*ಸಮಾನಧರ್ಮ :* ಹಾರಾಟ<br>ಇಲ್ಲಿ ಉಪಮೇಯವಾದ 'ಬಾನಿನಲ್ಲಿನ ಗಾಳಿಪಟ'ಗಳನ್ನು ಉಪಮಾನವಾದ 'ಹಕ್ಕಿಗಳಿಗೆ' ಹೋಲಿಸಲಾಗಿದೆ. 'ಅಂತೆ' ಎಂಬ ಉಪಮಾವಾಚಕ ಪದವಿದ್ದು, 'ಹಾರಾಟ' ಎಂಬ ಸಮಾನಧರ್ಮ ಇರುವುದರಿಂದ ಇದು ಪೂರ್ಣೋಪಮಾಲಂಕಾರ (ಉಪಮಾಲಂಕಾರ) ದ ಲಕ್ಷ್ಯವಾಗಿದೆ. | |
| **VIII.** | **ಗಾದೆಯನ್ನು ವಿಸ್ತರಿಸಿ ಬರೆಯುವುದು :** | **2 × 3 = 6** |
| | ಗಾದೆಯ ಮಹತ್ವದ ವಿವರಣೆ | 1 ಅಂಕ |
| | ಉದಾಹರಣೆಯೊಂದಿಗೆ ಅರ್ಥ ವಿವರಣೆ | 1 ಅಂಕ |
| | ಭಾಷಾಶೈಲಿಗೆ–ಪದಬಂಧಗಳಿಗೆ | 1 ಅಂಕ |
| | ಒಟ್ಟು | 3 ಅಂಕಗಳು |
| 45. | ಕಟ್ಟುವುದು ಕಠಿಣ; ಕೆಡಹುವುದು ಸುಲಭ.<br>**ಅಥವಾ**<br>ಮಾಡಿದ್ದುಣ್ಣೋ ಮಾರಾಯ. | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 46. | ಮನಸ್ಸಿದ್ದರೆ ಮಾರ್ಗ.<br>**ಅಥವಾ**<br>ಶಕ್ತಿಗಿಂತ ಯುಕ್ತಿ ಮೇಲು. | |
| **IX.** | **ಸಂದರ್ಭವನ್ನು ಸ್ವಾರಸ್ಯದೊಂದಿಗೆ ಬರೆಯುವುದು :** | **6 × 3 = 18** |
| | ಕರ್ತೃ, ಆಕರ ಮತ್ತು ಪಠ್ಯದ ಹೆಸರು | 1 ಅಂಕ |
| | ಸಂದರ್ಭದ ವಿವರಣೆ | 1 ಅಂಕ |
| | ಸ್ವಾರಸ್ಯ ಮತ್ತು ಶೈಲಿ | 1 ಅಂಕ |
| | ಒಟ್ಟು | 3 ಅಂಕಗಳು |
| 47. | "ರಾಮನೇ ಧೈರ್ಯಗೆಡೆ ಸ್ಥೈರ್ಯಕೆಡೆಯಾರು ?"<br>***ಉತ್ತರ :***<br>***ಆಯ್ಕೆ :*** ಪ್ರಸ್ತುತ ವಾಕ್ಯವನ್ನು 'ಪು.ತಿ. ನರಸಿಂಹಾಚಾರ್' ಅವರು ರಚಿಸಿರುವ 'ಶಬರಿ' ಗೀತನಾಟಕದಿಂದ ಆಯ್ದ 'ಶಬರಿ' ಎಂಬ ಗದ್ಯಪಾಠದಿಂದ ಆರಿಸಿಕೊಳ್ಳಲಾಗಿದೆ.<br>***ಸಂದರ್ಭ :*** ಸೀತಾಪಹರಣದ ನಂತರ ರಾಮಲಕ್ಷ್ಮಣರು ಸೀತೆಯನ್ನು ಎಲ್ಲಾ ಕಡೆ ಹುಡುಕಿದರೂ ಸೀತೆಯ ಸುಳಿವು ಸಿಗದೇ ಇದ್ದಾಗ, ಅಸಹಾಯಕನಾದ ಶ್ರೀರಾಮನು ಗಿರಿವನವನ್ನು ಕುರಿತು ಸೀತೆ ನನಗೆ ದೊರೆವಳೇ, ದೊರೆಯಳೇ ಎಂದು ಪ್ರಾರ್ಥಿಸಿಕೊಳ್ಳುತ್ತಿರುವುದನ್ನು ಗಮನಿಸಿದ ಲಕ್ಷ್ಮಣನು "ತಾಳಿಕೋ ಅಣ್ಣಾ ತಾಳಿಕೋ, ಸೂರ್ಯನೇ ಕಾಂತಿಯನ್ನು ಕಳೆದುಕೊಂಡರೆ ಆ ಕಾಂತಿಯನ್ನು ನೀಡುವವರು ಯಾರು?" ಎಂದು ಹೇಳುತ್ತಾ ಅಣ್ಣನನ್ನು ಸಂತೈಸುವ ಸಂದರ್ಭದಲ್ಲಿ ಮೇಲ್ಕಂಡ ಮಾತು ಬಂದಿದೆ.<br>***ಸ್ವಾರಸ್ಯ :*** ಅಖಿಲ ಲೋಕಕ್ಕೆ ತೇಜಸ್ಸನ್ನು ನೀಡುವ ಸೂರ್ಯನೇ ಮಂಕಾದರೆ ಜಗತ್ತು ಕತ್ತಲೆಯಲ್ಲಿ ಮುಳುಗುತ್ತದೆ. ಹಾಗೆಯೇ ಲೋಕೋದ್ಧಾರಕನಾದ ಶ್ರೀರಾಮನೇ ಧೈರ್ಯವನ್ನು ಕಳೆದುಕೊಂಡರೆ ಜನಸಾಮಾನ್ಯರ ಸ್ಥಿತಿ ಏನು ಎಂದು ಭಾವಿಸಿ ಲಕ್ಷ್ಮಣ ಆಂತಕಗೊಂಡಿರುವುದು ಇಲ್ಲಿ ಸ್ವಾರಸ್ಯಪೂರ್ಣಗಿ ವ್ಯಕ್ತಗೊಂಡಿದೆ. | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 48. | "ನಿಮ್ಮ ದೇಶದ ಗೌರವವನ್ನು ಕಾಯಿರಿ! ಇದು ದೊಡ್ಡದಾದ ರಾಷ್ಟ್ರ"<br>**ಉತ್ತರ :**<br>**ಆಯ್ಕೆ :** ಪ್ರಸ್ತುತ ವಾಕ್ಯವನ್ನು 'ವಿ.ಕೃ. ಗೋಕಾಕ್' ಅವರು ರಚಿಸಿರುವ 'ಸಮುದ್ರದಾಚೆಯಿಂದ' ಎಂಬ ಪ್ರವಾಸಕಥನದಿಂದ ಆಯ್ದ 'ಲಂಡನ್ ನಗರ' ಎಂಬ ಗದ್ಯಪಾಠದಿಂದ ಆರಿಸಿಕೊಳ್ಳಲಾಗಿದೆ.<br>**ಸಂದರ್ಭ :** ಲೇಖಕರು ಲಂಡನ್ ನಗರಕ್ಕೆ ಪ್ರವಾಸ ಕೈಗೊಂಡಿದ್ದಾಗ ಲಂಡನ್ ನಗರದ ಸೌಂದರ್ಯ, ಅಲ್ಲಿಯ ಜೀವನಕ್ರಮ, ಮಹಾಪುರುಷರ ಸ್ಮಾರಕಗಳು ಹಾಗೂ ತಮ್ಮ ದೇಶಕ್ಕಾಗಿ ಜೀವನವನ್ನು ಲೆಕ್ಕಿಸದೆ ದುಡಿದ ಇತಿಹಾಸ ಪ್ರಸಿದ್ಧ ಮಹಾಪುರುಷರ ಜೀವನದಲ್ಲಿನ ಮಹತ್ವದ ಸನ್ನಿವೇಶಗಳನ್ನು ಪರಿಚಯಿಸುವ ಸಂದರ್ಭದಲ್ಲಿ ಮೇಲ್ಕಂಡ ಮಾತನ್ನು ಹೇಳಿದ್ದಾರೆ.<br>**ಸ್ವಾರಸ್ಯ :** ಇಂಗ್ಲೆಂಡ್‌ನಲ್ಲಿ ವಿವಿಧ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ ಸಾಧಕರನ್ನು ಸ್ಮಾರಕವಾಗಿ ಸ್ಮರಣೀಯವಾಗಿ ಬಳಸಿಕೊಳ್ಳುವುದರ ಮೂಲಕ ಅವರಲ್ಲಿರುವ ರಾಷ್ಟ್ರಪ್ರೇಮ, ಐತಿಹಾಸಿಕ ಪ್ರಜ್ಞೆ ಇತ್ಯಾದಿ ಅಂಶಗಳು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತಗೊಂಡಿದೆ. | |
| 49. | "ಪೊನ್ನನೆಲ್ಲಮಂ ನೀನೆ ಕೊಂಡೆ"<br>**ಉತ್ತರ :**<br>**ಆಯ್ಕೆ :** ಪ್ರಸ್ತುತ ವಾಕ್ಯವನ್ನು 'ದುರ್ಗಸಿಂಹ' ಕವಿ ರಚಿಸಿರುವ 'ಕರ್ಣಾಟಕ ಪಂಚತಂತ್ರಂ' ಕೃತಿಯಿಂದ ಆಯ್ದ 'ವೃಕ್ಷಸಾಕ್ಷಿ' ಎಂಬ ಗದ್ಯಪಾಠದಿಂದ ಆರಿಸಿಕೊಳ್ಳಲಾಗಿದೆ.<br>**ಸಂದರ್ಭ :** ಧರ್ಮಬುದ್ಧಿ ಮತ್ತು ದುಷ್ಟಬುದ್ಧಿ ಇಬ್ಬರೂ ಕೂಡಿ ಸಂಪಾದಿಸಿದ ಹೊನ್ನಿನಲ್ಲಿ ಖರ್ಚಿಗೆ ಬೇಕಾದಷ್ಟು ತೆಗೆದುಕೊಂಡು ಉಳಿದೆಲ್ಲವನ್ನು ಗುಂಡಿಯೊಳಕ್ಕೆ ಬಚ್ಚಿಟ್ಟಿದ್ದರು. ನಂತರ ದುಷ್ಟಬುದ್ಧಿ ಧರ್ಮಬುದ್ಧಿಗೆ ಗೊತ್ತಾಗದ ಹಾಗೆ ಅದೆಲ್ಲವನ್ನು | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ತಾನೇ ತೆಗೆದುಕೊಂಡು ಆಮೇಲೆ ಖರ್ಚಿಗೆ ಹಣ ಇಲ್ಲ ಎಂದು ಧರ್ಮಬುದ್ಧಿಯನ್ನು ತಾವು ಹೊನ್ನನ್ನು ಬಚ್ಚಿಟ್ಟಿದ್ದ ಸ್ಥಳಕ್ಕೆ ಕರೆದುಕೊಂಡು ಬಂದು ಹೊನ್ನು ಕಾಣದೇ ಇದ್ದಾಗ ಧರ್ಮಬುದ್ಧಿಯ ಮೇಲೆ ಹೊನ್ನಿನ ಕಳ್ಳತನದ ಆರೋಪವನ್ನು ಹೊರಿಸಿದ ಸಂದರ್ಭದಲ್ಲಿ ಈ ಮಾತನ್ನು ಹೇಳಿದನು. | |
| | ***ಸ್ವಾರಸ್ಯ :*** ದುಷ್ಟಬುದ್ಧಿಯ ವಂಚನೆ, ಕಪಟತನ, ವಿಶ್ವಾಸಘಾತುಕತನ, ಮಿತ್ರದ್ರೋಹಿತನ ಇತ್ಯಾದಿ ಅಂಶಗಳು ಇಲ್ಲಿ ಸ್ವಾರಸ್ಯಪೂರ್ಣ ವಾಗಿ ವ್ಯಕ್ತಗೊಂಡಿದೆ. | |
| 50. | ''ಮಂಗಳ ಲೋಕದ ಅಂಗಳಕೇರಿ'' | |
| | ***ಉತ್ತರ :*** | |
| | ***ಆಯ್ಕೆ :*** ಪ್ರಸ್ತುತ ವಾಕ್ಯವನ್ನು 'ದ.ರಾ. ಬೇಂದ್ರೆಯವರು' ರಚಿಸಿರುವ 'ಗರಿ' ಕವನ ಸಂಕಲನದಿಂದ ಆಯ್ದ 'ಹಕ್ಕಿ ಹಾರುತಿದೆ ನೋಡಿದಿರಾ' ಎಂಬ ಪದ್ಯಪಾಠದಿಂದ ಆರಿಸಿಕೊಳ್ಳಲಾಗಿದೆ. | |
| | ***ಸಂದರ್ಭ :*** ಕವಿ ಬೇಂದ್ರೆ ಅವರು ಕಾಲದ ಗತಿಯನ್ನು ಹಾರುವ ಹಕ್ಕಿಯೊಂದಿಗೆ ಸಮೀಕರಿಸಿ ಕಾಲಪಕ್ಷಿಯು ಶುಕ್ರಗ್ರಹವೆಂಬ ಹಳ್ಳಿಯ ಮೇರೆಯನ್ನು ಮೀರಿ, ಚಂದ್ರಲೋಕದ ನೀರನ್ನು ಹೀರಿ, ಆಡುತ್ತಾ, ಹಾಡುತ್ತಾ, ಹಾರುತ್ತಾ ಮಂಗಳ ಲೋಕದ ಅಂಗಳಕ್ಕೆ ಏರಿದೆ ಎಂದು ವರ್ಣನೆ ಮಾಡುವ ಸಂದರ್ಭದಲ್ಲಿ ಈ ಮಾತನ್ನು ಹೇಳಿದ್ದಾರೆ. | |
| | ***ಸ್ವಾರಸ್ಯ :*** ಶುಕ್ರ, ಚಂದ್ರ, ಮಂಗಳ ಲೋಕದ ಸಂಚಾರ ಕಾಲದ ಭೌತಿಕ ಲಕ್ಷಣಗಳು ಹಾಗೂ ಮಾನವ ಪ್ರಪಂಚದಲ್ಲಾಗುವ ದಾರ್ಶನಿಕ, ವೈಜ್ಞಾನಿಕ ಮುನ್ನೋಟಗಳು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತಗೊಂಡಿದೆ. | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| 51. | "ಬೆನ್ನಬೆನ್ನತ್ತಿ ತಿರಿತಿರ್ವಿ ಕಡಿದರೊ ಏನು ಉಳಿಯದ್ವಂಗ"<br>***ಉತ್ತರ :***<br>**ಆಯ್ಕೆ :** ಪ್ರಸುತ್ತ ವಾಕ್ಯವನ್ನು 'ಡಾ. ಬಿ.ಎಸ್. ಗದ್ದಗಿಮಠ' ಅವರು ಸಂಪಾದಿಸಿರುವ 'ಕನ್ನಡ ಜನಪದ ಗೀತೆಗಳು' ಕೃತಿಯಿಂದ ಆಯ್ದ 'ಹಲಗಲಿ ಬೇಡರು' ಎಂಬ ಪದ್ಯಪಾಠದಿಂದ ಆರಿಸಿಕೊಳ್ಳಲಾಗಿದೆ.<br>***ಸಂದರ್ಭ :*** ವ್ಯಾಪಾರಕ್ಕಾಗಿ ಭಾರತಕ್ಕೆ ಬಂದ ಬ್ರಿಟಿಷರು ೧೮೫೭ ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಅನಂತರ ನಿಶ್ಶಸ್ತ್ರೀಕರಣ ಕಾಯ್ದೆಯನ್ನು ಜಾರಿಗೆ ತಂದರು. ಈ ಕಾಯ್ದೆಯನ್ನು ವಿರೋಧಿಸಿ ಹಲಗಲಿ ಬೇಡರು ಕುಂಪಣಿ ಸರ್ಕಾರದ ವಿರುದ್ಧ ದಂಗೆ ಎದ್ದು ಮುಂಗಾರಿನ ಸಿಡಿಲು ಸಿಡಿಯುವ ಹಾಗೆ ಗುಂಡನ್ನು ಹಾರಿಸಿದರು. ಇದಕ್ಕೆ ಪ್ರತಿಯಾಗಿ ಬ್ರಿಟಿಷರ ದಂಡು ಹಲಗಲಿಯನ್ನು ಮುತ್ತಿ ದಂಗೆ ಎದ್ದವರನ್ನು ಹೇಗೆ ಬಗ್ಗುಬಡಿದರು ಎಂದು ಹೇಳುವ ಮೂಲಕ ದಾಳಿಯ ತೀವ್ರತೆಯನ್ನು ವಿವರಿಸುವ ಸಂದರ್ಭದಲ್ಲಿ ಲಾವಣಿಕಾರ ಈ ಮಾತನ್ನು ಹೇಳಿದ್ದಾನೆ.<br>***ಸ್ವಾರಸ್ಯ :*** ಬ್ರಿಟಿಷರು ಹೊಸ ಹೊಸ ಕಾಯ್ದೆಗಳನ್ನು ಜಾರಿಗೆ ತರುವುದರ ಮೂಲಕ ಕಾಯ್ದೆ ವಿರೋಧಿಸಿದ ಭಾರತೀಯರ ಮೇಲೆ ದಮನಕಾರಿ ನೀತಿ, ದಬ್ಬಾಳಿಕೆ, ದೌರ್ಜನ್ಯಗಳನ್ನು ಎಸಗುತ್ತಿದ್ದರು ಎಂಬುದನ್ನು ಇಲ್ಲಿ ಅರ್ಥಪೂರ್ಣವಾಗಿ ವ್ಯಕ್ತಪಡಿಸಲಾಗಿದೆ. | |
| 52. | "ತನ್ನ ಮಾತೆಯಂ ಸರ್ವಜನಮುಂ ಬಂಜೆಯೆನ್ನದಿರ್ದಪುದೆ"<br>***ಉತ್ತರ :***<br>**ಆಯ್ಕೆ :** ಪ್ರಸ್ತುತ ವಾಕ್ಯವನ್ನು ಲಕ್ಷ್ಮೀಶ ಕವಿ ರಚಿಸಿರುವ 'ಜೈಮಿನಿಭಾರತ' ಕಾವ್ಯದಿಂದ ಆಯ್ದ 'ವೀರಲವ' ಎಂಬ ಪದ್ಯಪಾಠದಿಂದ ಆರಿಸಲಾಗಿದೆ. | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ***ಸಂದರ್ಭ :*** ಶ್ರೀರಾಮನ ಅಶ್ವಮೇಧಯಾಗದ ಕುದುರೆಯ ಹಣೆಯ ಪಟ್ಟಿಯಲ್ಲಿದ್ದ "ಇಡೀ ಭೂಮಂಡಲದಲ್ಲಿ ಕೌಸಲ್ಯೆಯ ಮಗನಾದ ಶ್ರೀರಾಮನೋರ್ವನೇ ವೀರನು. ಇದು ಆತನ ಯಜ್ಞ ಕುದುರೆ, ಇದನ್ನು ನಿರ್ವಹಿಸುವವರು ಯಾರಾದರೂ ಇದ್ದರೆ ತಡೆಯಲಿ" ಎಂದಿದ್ದ ಲೇಖನವನ್ನು ಓದಿ ಲವನು ಕೋಪಗೊಂಡ ಸಂದರ್ಭದಲ್ಲಿ ಮೇಲಿನ ಮಾತನ್ನು ತನ್ನಲ್ಲೇ ಹೇಳಿಕೊಳ್ಳುತ್ತಾನೆ. | |
| | ***ಸ್ವಾರಸ್ಯ :*** ಲವ ಹುಟ್ಟಿದ್ದು ಋಷ್ಯಾಶ್ರಮದಲ್ಲಾದರೂ ಆತನಲ್ಲಿದ್ದ ಸಹಜ ಕ್ಷಾತ್ರಗುಣ, ವೀರತನ, ಮಾತೃಪ್ರೇಮ, ಸವಾಲುಗಳು ಬಂದಾಗ ಚಿಕ್ಕವರು, ಅಸಮರ್ಥರು ಎಂದು ಕೂರದೆ ದಿಟ್ಟತನದಿಂದ ಎದುರಿಸಬೇಕೆಂಬ ಬಾಲ್ಯ ಸಹಜ ಸಾಹಸ ಪ್ರವೃತ್ತಿ ಇತ್ಯಾದಿ ಅಂಶಗಳು ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತಗೊಂಡಿವೆ. | |
| **X.** | **ಪದ್ಯಭಾಗ ಪೂರ್ಣ ಮಾಡುವುದು : (ತಪ್ಪಿಲ್ಲದೇ ಬರೆದ ಪ್ರತಿ ಪೂರ್ಣಸಾಲಿಗೆ 1 ಅಂಕ)** | **1 × 4 = 4** |
| 53. | ಹಸುರಾಗಸ; ..................................................<br>..........................................................................<br>..........................................................................<br>........................................................ ಬಿಸಿಲೂ!<br><br>**ಅಥವಾ**<br><br>ಹೊಸ ಹೂವಿನ ..................................................<br>..........................................................................<br>..........................................................................<br>...................................................... ಯುಸಿರೂ! | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ***ಉತ್ತರ :***<br>ಹಸುರಾಗಸ; ಹಸುರು ಮುಗಿಲು;<br>ಹಸುರು ಗದ್ದೆಯಾ ಬಯಲು;<br>ಹಸುರಿನ ಮಲೆ; ಹಸುರು ಕಣಿವೆ;<br>ಹಸುರು ಸಂಜೆಯೀ ಬಿಸಿಲೂ !<br>**ಅಥವಾ**<br>ಹೊಸ ಹೂವಿನ ಕಂಪು ಹಸುರು,<br>ಎಲರಿನ ತಂಪೂ ಹಸುರು !<br>ಹಕ್ಕಿಯ ಕೊರಲಿಂಪು ಹಸುರು !<br>ಹಸುರು ಹಸುರಿಳೆಯುಸಿರೂ ! | |
| **XI.** | **ಪದ್ಯಭಾಗವನ್ನು ಓದಿ, ಅರ್ಥಮಾಡಿಕೊಂಡು, ಮೌಲ್ಯವನ್ನಾಧರಿಸಿ ಸಾರಾಂಶ ಬರೆಯುವುದು :** | **1 × 4 = 4** |
| | ವಿಷಯಾಂಶಕ್ಕೆ | 3 ಅಂಕಗಳು |
| | ಅಡಕಗೊಂಡ ಮೌಲ್ಯ ಗುರುತಿಸುವುದು, ಪದಬಂಧ ಮತ್ತು ಭಾಷಾಶೈಲಿಗೆ | 1 ಅಂಕ |
| | ಒಟ್ಟು | 4 ಅಂಕಗಳು |
| 54. | ಮರುಳು ಮಾಧವ ಮಹಿಯ ರಾಜ್ಯದ<br>ಸಿರಿಗೆ ಸೋಲುವನಲ್ಲ ಕೌಂತೇ<br>ಯರು ಸುಯೋಧನರೆನಗೆ ಬೆಸಕೈವಲ್ಲಿ ಮನವಿಲ್ಲ<br>ಹೊರೆದ ದಾತಾರಂಗೆ ಹಗೆವರ<br>ಶಿರವನರಿದೊಪ್ಪಿಸುವೆನೆಂಬೀ<br>ಭರದೊಳಿರ್ದೆನು ಕೌರವೇಂದ್ರನ ಕೊಂದೆ ನೀನೆಂದ<br>***ಉತ್ತರ :***<br>ಪ್ರಸ್ತುತ ಪದ್ಯಭಾಗವನ್ನು ಕುಮಾರವ್ಯಾಸ ಕವಿ ರಚಿಸಿರುವ 'ಕೌರವೇಂದ್ರನ ಕೊಂದೆ ನೀನು' ಎಂಬ ಪದ್ಯಪಾಠದಿಂದ ಆರಿಸಿಕೊಳ್ಳಲಾಗಿದೆ. ಕೃಷ್ಣಸಂಧಾನವು ತಿರಸ್ಕೃತಗೊಂಡು ಯುದ್ಧ ಅನಿವಾರ್ಯವೆಂದಾದಾಗ ಧರ್ಮಪಕ್ಷಪಾತಿಯಾದ ಶ್ರೀಕೃಷ್ಣನು ಭೇದತಂತ್ರವನ್ನು ಬಳಸಿ ಕರ್ಣನಿಗೆ ಆತನ ಜನ್ಮರಹಸ್ಯವನ್ನು ತಿಳಿಸಿ ಮನದಲ್ಲಿ ನೋವು, ಸಂಕಟ ಉಂಟಾಗುವಂತೆ ಮಾಡಿ ಅನಂತರ ನಿನಗೆ | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| | ಹಸ್ತಿನಪುರದ ರಾಜ್ಯದ ಘನತೆಯನ್ನು ಮಾಡುವೆನು ಎಂಬ ಆಮಿಷವನ್ನು ಒಡ್ಡಿದನು. ಆಗ ಕರ್ಣನು ಕೃಷ್ಣನನ್ನು ಕುರಿತು "ಮರುಳು ಮಾಧವ ನಾನು ಈ ರಾಜ್ಯದ ಸಿರಿಗೆ ಸೋಲುವವನಲ್ಲ. ಪಾಂಡವರು, ದುರ್ಯೋಧನರಿಂದ ಸೇವೆ ಮಾಡಿಸಿಕೊಳ್ಳಲು ಮನಸ್ಸಿಲ್ಲ. ನನ್ನನ್ನು ಕಾಪಾಡಿದ ನನ್ನ ಒಡೆಯನಾದ ದುರ್ಯೋಧನನಿಗೆ ಶತ್ರುಗಳ ತಲೆಯನ್ನು ಕಡಿದು ಒಪ್ಪಿಸಬೇಕೆಂಬ ಆತುರದಲ್ಲಿ ಇದ್ದೆನು. ಆದರೆ ನೀನು ನನ್ನ ಜನ್ಮರಹಸ್ಯವನ್ನು ಹೇಳಿ ಕೌರವೇಂದ್ರನನ್ನು ಕೊಂದೆ" ಎಂದು ಹೇಳಿದನು. | |
| | ಅಸಾಮಾನ್ಯನೂ, ಶೌರ್ಯಕ್ಕೆ, ದಾನಕ್ಕೆ, ಉದಾತ್ತತೆಗೆ, ಕರುಣೆಗೆ ಹೆಸರಾಗಿದ್ದ ಕರ್ಣನು ಶ್ರೀಕೃಷ್ಣನೊಡ್ಡಿದ ಪ್ರಲೋಭನೆಗೆ ಒಳಗಾಗದೆ ಅಸಹಾಯಕನಾದ ಸ್ಥಿತಿಯಲ್ಲಿ ನೋವು ಸಂಕಟದಿಂದ ಬಳಲುವ ಆತನ ವ್ಯಕ್ತಿತ್ವದ ಹಿರಿಮೆ, ಸ್ವಾಮಿನಿಷ್ಠೆ ಇಲ್ಲಿ ಕಂಡುಬರುವ ಉತ್ತಮ ಮೌಲ್ಯಗಳಾಗಿವೆ. | |
| **XII.** | **ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸುವುದು :** | **2 × 4 = 8** |
| | ಅಂಶಗಳನ್ನಾಧರಿಸಿ ಪಠ್ಯಾಂಶಕ್ಕೆ | 3 ಅಂಕಗಳು |
| | ಭಾಷಾಶೈಲಿಗೆ, ಪದಬಂಧಗಳಿಗೆ | 1 ಅಂಕ |
| | ಒಟ್ಟು | 4 ಅಂಕಗಳು |
| 55. | ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ 'ಪ್ರಜಾಪ್ರತಿನಿಧಿ ಸಭೆ' ಹಾಗೂ 'ನ್ಯಾಯ ವಿಧಾಯಕ ಸಭೆ'ಯನ್ನು ಕುರಿತು ಬರೆಯಿರಿ. | |
| | **ಅಥವಾ** | |
| | ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ. | |
| | ***ಉತ್ತರ :*** | |
| | ***'ಪ್ರಜಾಪ್ರತಿನಿಧಿ ಸಭೆ'*** : ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 'ಪ್ರಜಾಪ್ರತಿನಿಧಿ ಸಭೆ'ಯು ನೂತನ ರೂಪವನ್ನು ಪಡೆದು ನಿಜವಾದ ಜನ ಪ್ರತಿನಿಧಿ ಸಭೆಯಾಗಿ ಪರಿವರ್ತನೆಯಾಯಿತು. ಅದಕ್ಕಾಗಿ | |

| ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|
| ೧೯೨೩ ರಲ್ಲಿ ಹೊಸ ಕಾನೂನೊಂದನ್ನು ಜಾರಿಗೆ ತಂದು, ಪ್ರಜಾಪ್ರತಿನಿಧಿ ಸಭೆಯನ್ನು ಶಾಸನಬದ್ಧ ಸಂಸ್ಥೆಯನ್ನಾಗಿ ಮಾರ್ಪಡಿಸಿದರು. ಇದು ಪ್ರಜಾತಂತ್ರದ ದೃಷ್ಟಿಯಿಂದ ಭಾರತದಲ್ಲಿಯೇ ಮಾದರಿಯಾದ ಸಂಸ್ಥೆಯಾಗಿ ಕಾರ್ಯನಿರ್ವಹಿಸಲು ಆರಂಭಿಸಿತು. ಪ್ರಜಾಪ್ರತಿನಿಧಿ ಸಭೆಯು ವರ್ಷಕ್ಕೆ ಎರಡು ಬಾರಿ ಅಂದರೆ ೧ ಜೂನ್ ಮಹಾರಾಜರ ವರ್ಧಂತಿ, ೨ ಅಕ್ಟೋಬರ್ ದಸರಾ ಮಹೋತ್ಸವ ಸಂದರ್ಭಗಳಲ್ಲಿ ಸಮಾವೇಶಗೊಂಡು ಕಲಾಪಗಳನ್ನು ನಡೆಸುತ್ತಿತ್ತು. ಅಲ್ಲಿ ವಾರ್ಷಿಕ ಆಯವ್ಯಯ ಪರಿಶೀಲನೆ, ಪ್ರಶ್ನೋತ್ತರಗಳು, ಠರಾವುಗಳನ್ನು ಮಂಡಿಸುವುದು ಮುಂತಾದ ಸಂಸದೀಯ ಮಾದರಿಯ ನಡೆವಳಿಕೆ ನಡೆಯುತ್ತಿದ್ದವು. ಪ್ರಜಾಪ್ರತಿನಿಧಿ ಸಭೆಯಲ್ಲಿದ್ದ ೨೭೫ ಸದಸ್ಯರಲ್ಲಿ ಹೆಚ್ಚು ಪ್ರತಿನಿಧಿಗಳು ಜನರಿಂದ ಆಯ್ಕೆಯಾದವರಾಗಿದ್ದರು. | |
| **'ನ್ಯಾಯ ವಿಧಾಯಕ ಸಭೆ'** : ನಾಲ್ವಡಿ ಕೃಷ್ಣರಾಜ ಒಡೆಯರು ೧೯೦೭ ರಲ್ಲಿ ನ್ಯಾಯ ವಿಧಾಯಕ ಸಭೆಯನ್ನು ಸ್ಥಾಪಿಸಿದರು. ಇದರ ಸದಸ್ಯರ ಸಂಖ್ಯೆ ೫೦. ಇದರಲ್ಲಿ ಜನರಿಂದ ಆಯ್ಕೆಯಾದವರು ೨೨ ಸದಸ್ಯರು. ಮೇಲ್ಮನೆಯ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಈ ಸಂಸ್ಥೆ ಜೂನ್ ಮತ್ತು ಡಿಸೆಂಬರ್ ತಿಂಗಳುಗಳಲ್ಲಿ ಬೆಂಗಳೂರಿನಲ್ಲಿ ಸಮಾವೇಶಗೊಳ್ಳುತ್ತಿತ್ತು. ಪ್ರಜಾಪ್ರತಿನಿಧಿ ಸಭೆಯಲ್ಲಿ ಮಂಡಿಸಿದ ಎಲ್ಲಾ ವಿಷಯಗಳನ್ನು ವಿಮರ್ಶಿಸುವ ಅಧಿಕಾರ ಆ ಸಭೆಗೆ ಇದ್ದಿತು. ಮುಖ್ಯವಾಗಿ ಯಾವುದೇ ಕಾನೂನನ್ನು ಜಾರಿಗೊಳಿಸಲು ಆ ಸಭೆಯ ಅನುಮತಿ ಅಗತ್ಯವಾಗಿತ್ತು. ಆ ಸಭೆಗೆ ಸರ್ಕಾರದ ಖರ್ಚುಗಳನ್ನು ಕಡಿಮೆ ಮಾಡುವ ಅಧಿಕಾರ ಸಹ ಇತ್ತು. | |
| ಹೀಗೆ ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ 'ಪ್ರಜಾಪ್ರತಿನಿಧಿ ಸಭೆ' ಹಾಗೂ 'ನ್ಯಾಯ ವಿಧಾಯಕ ಸಭೆ'ಗಳು ಕಾರ್ಯನಿರ್ವಹಿಸಿದವು. | |
| **ಅಥವಾ** | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| | ವಿಶ್ವೇಶ್ವರಯ್ಯನವರು ಆಧುನಿಕ ಶಿಕ್ಷಣವೇ ಎಲ್ಲಾ ಸಮಸ್ಯೆಗಳಿಗೂ ಪರಮೋಚ್ಚ ಪರಿಹಾರವೆಂದು ನಂಬಿದ್ದರು. ಶಿಕ್ಷಣವು ಸಂಜೀವಿನಿ ಎಂಬುದನ್ನು ಅರಿತಿದ್ದ ಅವರು ಶಿಕ್ಷಣದ ವಿವಿಧ ಯೋಜನೆಗಳನ್ನು ರೂಪಿಸಿದರು. ಅದಕ್ಕಾಗಿ ೧೯೧೩ ರಲ್ಲಿ ಪ್ರಾಥಮಿಕ ಶಿಕ್ಷಣ ನಿಬಂಧನೆಯನ್ನು ಜಾರಿಗೆ ತಂದರು. ಪ್ರೌಢಶಿಕ್ಷಣ ಶಾಲೆಗಳು ಮದ್ರಾಸ್ ವಿಶ್ವವಿದ್ಯಾನಿಲಯದ ನಿಯಂತ್ರಣಕ್ಕೆ ಒಳಪಟ್ಟಿದ್ದವು. ಇದನ್ನು ಬದಲಿಸಿ ಸಂಸ್ಥಾನವೇ ಪ್ರತ್ಯೇಕವಾದ ಪ್ರೌಢಶಿಕ್ಷಣದ ಅಂತಿಮ ಪರೀಕ್ಷೆ ನಡೆಸುವ ಯೋಜನೆಯನ್ನು ಆರ್ಥಿಕ ಪರಿಷತ್ತಿನ ಮೂಲಕ ರೂಪುಗೊಳಿಸಿದರು. ಮೈಸೂರು ವಿಶ್ವವಿದ್ಯಾನಿಲಯದ ಸ್ಥಾಪನೆ ಇವರ ದೂರದೃಷ್ಟಿಯ ಮತ್ತೊಂದು ಫಲಶ್ರುತಿ. "ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು" ಎಂಬುದನ್ನು ಮನಗಂಡ ಅವರು ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣಕ್ಕೆ ಆದ್ಯತೆ ನೀಡಿದರು. ಬೆಂಗಳೂರಿನಲ್ಲಿ ಮೆಕಾನಿಕಲ್ ಎಂಜಿನಿಯರಿಂಗ್ ಶಾಲೆ, ಮೈಸೂರಿನಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆಗಳನ್ನು ಪ್ರಾರಂಭಿಸಿದರು. | |
| 56. | ಪರಶುರಾಮನು ಸಹಾಯ ಅರಸಿ ಬಂದ ದ್ರೋಣರನ್ನು ಸತ್ಕರಿಸಿ ಬೀಳ್ಕೊಟ್ಟ ಬಗೆಯನ್ನು ವಿವರಿಸಿ.<br>**ಅಥವಾ**<br>ದ್ರೋಣನು ದ್ರುಪದನ ವಿರುದ್ಧ ಶಪಥ ಮಾಡಲು ಕಾರಣವಾದ ಅಂಶಗಳನ್ನು ವಿವರಿಸಿ.<br>***ಉತ್ತರ :***<br>ದ್ರೋಣರಿಗೆ ಬಡತನ ಬಂದಾಗ ಮಗನಾದ ಅಶ್ವತ್ಥಾಮನೊಂದಿಗೆ ದೇಶದೇಶಗಳನ್ನೆಲ್ಲಾ ಸುತ್ತಾಡಿ ಪರಶುರಾಮನ ಬಳಿಗೆ ಬಂದರು. ಈ ಸಮಯದಲ್ಲಿ ನಾರುಮಡಿಯಿಂದ ಕೂಡಿದ ನಡುವುಳ್ಳವನು, ಜಟಾಧಾರಿಯಿಂದ ಕೂಡಿದವನು ಆದ | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| | ಪರಶುರಾಮನು ತನ್ನೆಲ್ಲಾ ಒಡವೆಗಳನ್ನು ಬೇಡಿದವರಿಗೆ, ಭೂಮಂಡಲವನ್ನು ಗುರುವಿಗೆ ಕೊಟ್ಟಿದ್ದರಿಂದ ಆತನ ಬಳಿ ಒಂದು ಅಡಕೆಯೂ ಇರಲಿಲ್ಲ. ಈ ಸಂದರ್ಭದಲ್ಲಿ ಸಂಪತ್ತನ್ನು ಬೇಡುವುದಕ್ಕಾಗಿ ಬಂದ ವೇದಶಾಸ್ತ್ರ ಪಾರಂಗತನಾದ ದ್ರೋಣನನ್ನು ಚಿನ್ನದ ಪಾತ್ರೆ ಇಲ್ಲದೇ ಇದ್ದುದರಿಂದ ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಟ್ಟು ಪೂಜಿಸಿ ನಂತರ ಎಲೈ, ದ್ರೋಣನೇ ಈಗ ನನ್ನ ಬಳಿ ಬಿಲ್ಲು, ದಿವ್ಯಾಸ್ತ್ರಗಳ ಸಮೂಹ ಇದೆ. ಇವುಗಳಲ್ಲಿ ಯಾವುದನ್ನು ಕೊಡಲಿ ಹೇಳಿ ಎಂದಾಗ ದ್ರೋಣನು ನನಗೆ ವಿದ್ಯಾಧನವೇ ಧನವಾಗಿರುವುದರಿಂದ ಆ ದಿವ್ಯಾಸ್ತ್ರಗಳನ್ನೇ ದಯಪಾಲಿಸಬೇಕು ಎಂದನು. ಆಗ ಪರಶುರಾಮನು ವರುಣ, ವಾಯುವ್ಯ, ಆಗ್ನೇಯ, ಪೌರಂಧರ ಮೊದಲಾದ ಪ್ರಧಾನ ಅಸ್ತ್ರಗಳನ್ನು ನೀಡಿ ದ್ರೋಣನನ್ನು ಸತ್ಕರಿಸಿ ಬೀಳ್ಕೊಟ್ಟನು.<br>**ಅಥವಾ**<br>ದ್ರೋಣನು ತನ್ನ ಗೆಳೆಯನಾದ ದ್ರುಪದನು ಛತ್ರಾವತಿಯಲ್ಲಿ ರಾಜನಾಗಿದ್ದಾನೆಂದು ತಿಳಿದು ಅರಮನೆಯ ಬಾಗಿಲಲ್ಲಿ ನಿಂತು ದ್ವಾರಪಾಲಕನನ್ನು ಕರೆದು ನಿನ್ನ ಬಾಲ್ಯದ ಗೆಳೆಯನಾದ ದ್ರೋಣ ಎಂಬ ಬ್ರಾಹ್ಮಣನು ಬಂದಿದ್ದಾನೆಂದು ರಾಜನಿಗೆ ಹೇಳು ಎಂದಾಗ, ದ್ವಾರಪಾಲಕನು ಅದೇ ರೀತಿ ರಾಜನಿಗೆ ಹೇಳಿದಾಗ, ಮದೋನ್ಮತ್ತನಾದ ದ್ರುಪದನು "ಇದೊಂದು ಭ್ರಮೆಯಲ್ಲವೇ? ಬ್ರಾಹ್ಮಣನಾದ ದ್ರೋಣ ನನಗೆ ಹೇಗೆ ಗೆಳೆಯನಾಗಲು ಸಾಧ್ಯ? ಅವನನ್ನು ಹೊರಗೆ ತಳ್ಳು" ಎಂದು ಹೇಳಿದನು. ದ್ವಾರಪಾಲಕನು ಬಂದು ಅದೇ ರೀತಿಯಲ್ಲಿ ಹೇಳಿದಾಗ, ದ್ರೋಣನು ಅರಮನೆಯನ್ನು ಪ್ರವೇಶಿಸಿ ದ್ರುಪದನನ್ನು ಕಂಡು "ಅಣ್ಣಾ, ನೀವು ನಾವು ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದುದು ತಿಳಿದಿಲ್ಲವೇ?" ಎಂದಾಗ, ದ್ರುಪದನು "ನಿನ್ನನ್ನು ನಾನು ತಿಳಿಯೆನು, ನೀನು ಅದೆಲ್ಲಿ ನನ್ನನ್ನು ಕಂಡಿದ್ದೀಯಾ? ರಾಜನಿಗೂ ಬ್ರಾಹ್ಮಣನಿಗೂ ಯಾವ ವಿಧವಾದ ಗೆಳೆತನ? ಮನುಷ್ಯರಾದವರು ಇಷ್ಟು ನಾಚಿಕೆಗೆಟ್ಟವರಾಗುತ್ತಾರೆಯೇ?" ಎಂದು ಹೇಳಿ ಈ ಬ್ರಾಹ್ಮಣನನ್ನು ಹೊರಗೆ ತಳ್ಳಿ ಎಂದು ದ್ರೋಣನನ್ನು | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ಮರ್ಮಾಘಾತವಾಗುವಂತೆ ಅವಮಾನಿಸಿದನು. ಆಗ ದ್ರೋಣನು ಐಶ್ವರ್ಯ ಬಂದರೆ ಮಧ್ಯಪಾನ ಮಾಡಿದವರಂತೆ ಮಾತುಗಳು ತೊದಲುವುವು. ಮುಖದಲ್ಲಿ ವಕ್ರಚೇಷ್ಟೆಯಾಗುವುದು, ಸಂಬಂಧಗಳನ್ನು ಮರೆಸುವುದು ಎಂದು ಹೇಳಿ, "ಎಲೈ, ನೀಚನೆ ನೊಣಕ್ಕೆ ಕಸದ ತಿಪ್ಪೆಯೇ ಶ್ರೇಷ್ಠವಾದದ್ದು ಎಂಬ ಗಾದೆ ಮಾತಿನಂತೆ ನಿನ್ನ ಯೋಗ್ಯತೆ ನನ್ನವರೆಗೂ ಬರಲು ಸಾಧ್ಯವೇ? ಜೊತೆಯಲ್ಲಿ ವಿದ್ಯಾಭ್ಯಾಸ ಮಾಡಿದೆವೆಂಬ ಒಂದೇ ಕಾರಣದಿಂದ ನಾನು ನಿನ್ನನ್ನು ಕೊಲ್ಲದೇ ಬಿಡುತ್ತಿದ್ದೇನೆ. ಈ ಸಭಾ ಮಧ್ಯದಲ್ಲಿ ನನ್ನನ್ನು ಹೀಯಾಳಿಸಿದ ನಿನ್ನನ್ನು ನನ್ನ ಶಿಷ್ಯರಿಂದ ನೀನು ಗಾಬರಿಯಾಗುವಂತೆ ಕಟ್ಟಿಸದಿದ್ದರೆ ನಾನು ಮೀಸೆಯನ್ನು ಹೊತ್ತಿರುವುದು ವ್ಯರ್ಥವಲ್ಲವೇ?" ಎಂದು ಶಪಥ ಮಾಡಿದನು. | |
| **XIII.** | **ಗದ್ಯಭಾಗವನ್ನು ಓದಿಕೊಂಡು, ಪ್ರಶ್ನೆಗಳಿಗೆ ಉತ್ತರಿಸುವುದು : (ಅಂಶಗಳನ್ನಾಧರಿಸಿ ಪ್ರತಿ ಸರಿಯುತ್ತರಕ್ಕೆ 2 ಅಂಕಗಳು)** | **1 × 4 = 4**<br>**( 2 + 2 )** |
| 57. | ಕೆಲವು ದಿನಗಳ ತರುವಾಯ ರಂಗಣ್ಣ ಸ್ಕೂಲುಗಳ ಭೇಟಿಗೆಂದು ಹೊರಟ. ತಿಪ್ಪೇನಹಳ್ಳಿಯ ಮೇಷ್ಟ್ರು ನಿಜವಾಗಿಯೂ ರೂಲ್ಸಿಗೆ ವಿರುದ್ಧವಾಗಿ ನಡೆಯುತ್ತಿದ್ದಾನೆಯೇ? ಇನ್ನೂ ಇತರರು ಯಾರು ಹಾಗೆ ದಾಖಲೆಯಿಲ್ಲದ ಮಕ್ಕಳನ್ನು ಸೇರಿಸಿಕೊಂಡಿದ್ದಾರೆ? ನೋಡೋಣ ಎಂದು ಆಲೋಚಿಸುತ್ತ ತಿಪ್ಪೇನಹಳ್ಳಿಗೆ ಸುಮಾರು ಒಂಬತ್ತು ಗಂಟೆ ಹೊತ್ತಿಗೆ ಹೋದ. ರಂಗಣ್ಣ ಬೈಸ್ಕಲ್ಲಿಂದ ಇಳಿದು, ಅದನ್ನು ಗೋಡೆಗೆ ಒರಗಿಸಿದನು. ಮೇಷ್ಟ್ರು ವೆಂಕಣ್ಣ ಭಯದಿಂದ ನಡುಗುತ್ತ ಹೊರಕ್ಕೆ ಬಂದು ನಮಸ್ಕಾರ ಮಾಡಿದನು. ಪಾಠಶಾಲೆಯ ಗೋಡೆಗೆ ನೋಟೀಸ್ ಬೋರ್ಡ್ ಒಂದನ್ನು ತಗಲುಹಾಕಿತ್ತು. ನೋಟೀಸು ಬೋರ್ಡಿನ ಮೇಲೆ (೧) ಮಕ್ಕಳು ಸರಿಯಾದ ಹೊತ್ತಿಗೆ ಬರಬೇಕು. (೨) ಪಾಠಕಾಲದಲ್ಲಿ ಗ್ರಾಮಸ್ಥರು ಒಳಕ್ಕೆ ಬರಕೂಡದು. (೩) ದಾಖಲೆಯಿಲ್ಲದ ಮಕ್ಕಳನ್ನು ಒಳಕ್ಕೆ ಸೇರಿಸುವುದಿಲ್ಲ. (೪) ಸ್ಕೂಲಿನ ಒಪ್ಪಾರದಲ್ಲಿ ಗ್ರಾಮಸ್ಥರು | |

| | ಪ್ರಶ್ನಾನುಸಾರ ಮೌಲ್ಯ ಮಾಪನ | ಅಂಕಗಳು |
|---|---|---|
| | ಯಾರೂ ಕುಳಿತು ಗಲಾಟೆ ಮಾಡಕೂಡದು – ಎಂದು ದಪ್ಪಕ್ಷರಗಳಲ್ಲಿ ಬರೆದಿತ್ತು. ರಂಗಣ್ಣ ಅವುಗಳನ್ನೆಲ್ಲಾ ನೋಡಿ ತೃಪ್ತಿಪಟ್ಟುಕೊಂಡನು. "ಮೇಷ್ಟ್ರೇ! ಹಿಂದೆ ಸಾಹೇಬರು ಬಂದಾಗ ಈ ನೋಟೀಸ್ ಬೋರ್ಡನ್ನು ಇಲ್ಲಿ ಹಾಕಿರಲಿಲ್ಲವೇ?" ಎಂದು ಕೇಳಿದನು.<br><br>"ಹಾಕಿದ್ದೆ ಸ್ವಾಮಿ! ಎಲ್ಲವನ್ನೂ ಹಾಕಿದ್ದೆ! ಏನು ಹಾಕಿದ್ದರೆ ಏನು? ನನ್ನ ಗ್ರಹಚಾರ! ತಮ್ಮ ಜುಲ್ಮಾನೆ ಆರ್ಡರು ನಿನ್ನೆ ನನ್ನ ಕೈಗೆ ತಲುಪಿತು ಸ್ವಾಮಿ! ಅದನ್ನು ನೋಡಿ ಎದೆಯೊಡೆದು ಹೋಯಿತು. ಅನ್ನ ನೀರು ಮುಟ್ಟಿದ್ದರೆ ಕೇಳಿ! ಆ ಸೂರ್ಯನಾರಾಯಣನ ಆಣೆ!" ಎಂದನು.<br><br>ಪ್ರಶ್ನೆಗಳು :<br><br>ಅ) ತಿಪ್ಪೇನಹಳ್ಳಿ ಪಾಠಶಾಲೆಯ ನೋಟೀಸ್ ಬೋರ್ಡಿನ ಮೇಲೆ ಏನೆಂದು ಬರೆಯಲಾಗಿತ್ತು ?<br><br>ಬ) ರಂಗಣ್ಣ ತಿಪ್ಪೇನಹಳ್ಳಿ ಶಾಲೆಗೆ ಭೇಟಿ ನೀಡಲು ಕಾರಣವೇನು ?<br><br>**ಉತ್ತರ :**<br><br>ಅ) ತಿಪ್ಪೇನಹಳ್ಳಿ ಪಾಠಶಾಲೆಯ ನೋಟೀಸ್ ಬೋರ್ಡಿನ ಮೇಲೆ (೧) ಮಕ್ಕಳು ಸರಿಯಾದ ಹೊತ್ತಿಗೆ ಬರಬೇಕು. (೨) ಪಾಠಕಾಲದಲ್ಲಿ ಗ್ರಾಮಸ್ಥರು ಒಳಕ್ಕೆ ಬರಕೂಡದು. (೩) ದಾಖಲೆಯಿಲ್ಲದ ಮಕ್ಕಳನ್ನು ಒಳಕ್ಕೆ ಸೇರಿಸುವುದಿಲ್ಲ. (೪) ಸ್ಕೂಲಿನ ಒಪ್ಪಾರದಲ್ಲಿ ಗ್ರಾಮಸ್ಥರು ಯಾರೂ ಕುಳಿತು ಗಲಾಟೆ ಮಾಡಕೂಡದು – ಎಂದು ಬರೆಯಲಾಗಿತ್ತು.<br><br>ಬ) ತಿಪ್ಪೇನಹಳ್ಳಿಯ ಮೇಷ್ಟ್ರು ನಿಜವಾಗಿಯೂ ರೂಲ್ಸಿಗೆ ವಿರುದ್ಧವಾಗಿ ನಡೆಯುತ್ತಿದ್ದಾನೆಯೇ? ಇನ್ನೂ ಇತರರು ಯಾರು ಹಾಗೆ ದಾಖಲೆಯಿಲ್ಲದ ಮಕ್ಕಳನ್ನು ಸೇರಿಸಿಕೊಂಡಿದ್ದಾರೆ? ನೋಡೋಣ ಎಂದು ಆಲೋಚಿಸುತ್ತ ರಂಗಣ್ಣ ತಿಪ್ಪೇನಹಳ್ಳಿ ಶಾಲೆಗೆ ಭೇಟಿ ನೀಡಿದನು. | |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| **XIV.** | **ಪತ್ರ ಲೇಖನ ಬರೆಯುವುದು :** | **1 × 5 = 5** |
| 58. | ನಿಮ್ಮನ್ನು ಹಾಸನದ ವಿಜಯನಗರದ ನಿವಾಸಿ 'ವಸಂತ್‌ಕುಮಾರ್' ಎಂದು ಭಾವಿಸಿಕೊಂಡು, ನಿಮ್ಮ ಪ್ರದೇಶದಲ್ಲಿ ಉಂಟಾದ ಪ್ರವಾಹದ ಪರಿಸ್ಥಿತಿಯನ್ನು ವಿವರಿಸಿ, ಪರಿಹಾರ ಕಾರ್ಯಕೈಗೊಳ್ಳುವಂತೆ ಕೋರಿ ಜಿಲ್ಲಾಧಿಕಾರಿಗೊಂದು ಮನವಿ ಪತ್ರವನ್ನು ಬರೆಯಿರಿ. | |
| | **ಅಥವಾ** | |
| | ನಿಮ್ಮನ್ನು ಬೆಂಗಳೂರಿನ ಸರ್ಕಾರಿ ಪ್ರೌಢಶಾಲೆಯ 'ರಕ್ಷಿತ' ಎಂದು ಭಾವಿಸಿಕೊಂಡು, ಶಾಲೆಯಲ್ಲಿ ಆಚರಿಸಿದ '75ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವ' ಕಾರ್ಯಕ್ರಮವನ್ನು ಕುರಿತು ಮೈಸೂರಿನ ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 'ಹರ್ಷಿತ' ಎಂಬ ಹೆಸರಿನ ಗೆಳತಿಗೆ ಪತ್ರವನ್ನು ಬರೆಯಿರಿ. | |
| | *ವ್ಯಾವಹಾರಿಕ / ಮನವಿ ಪತ್ರ :* | |
| | ಇಂದ, ಗೆ, ಸಂಬೋಧನೆ, ವಿಷಯ | 1 ಅಂಕ |
| | ಪತ್ರದ ಒಡಲು, ವಿಷಯ ನಿರೂಪಣೆ | 2 ಅಂಕಗಳು |
| | ವಂದನೆಯೊಂದಿಗೆ ಮುಕ್ತಾಯ, ಇಂತಿ, ಸ್ಥಳ, ದಿನಾಂಕ | 1 ಅಂಕ |
| | ಭಾಷಾಶೈಲಿಗೆ, ಪದಬಳಕೆ, ವಿನ್ಯಾಸ | 1 ಅಂಕ |
| | ಒಟ್ಟು | 5 ಅಂಕಗಳು |
| | **ಅಥವಾ** | |
| | *ಖಾಸಗಿ / ಗೆಳತಿಗೆ ಪತ್ರ :* | |
| | ಇಂದ ವಿಳಾಸ, ದಿನಾಂಕ, ಸಂಬೋಧನೆ, ಕ್ಷೇಮ ವಿಚಾರ | 1 ಅಂಕ |
| | ಪತ್ರದ ಒಡಲು, ವಿಷಯ ನಿರೂಪಣೆ | 2 ಅಂಕಗಳು |
| | ಮುಕ್ತಾಯ, ಇಂತಿ, ಸಹಿ, ಹೊರ ವಿಳಾಸ | 1 ಅಂಕ |
| | ಭಾಷಾಶೈಲಿಗೆ, ಪದಬಳಕೆ, ವಿನ್ಯಾಸ | 1 ಅಂಕ |
| | ಒಟ್ಟು | 5 ಅಂಕಗಳು |

| | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| **XV.** | **ಪ್ರಬಂಧ ಬರೆವಣಿಗೆ :** | **1 × 5 = 5** |
| 59. | ರಾಷ್ಟ್ರೀಯ ಭಾವೈಕ್ಯ | |
| | **ಅಥವಾ** | |
| | ಸಾಮಾಜಿಕ ಜಾಲತಾಣಗಳ ಸದ್ಬಳಕೆ | |
| | ಪ್ರಸ್ತಾವನೆ / ಪೀಠಿಕೆ / ವಿಷಯ ಪ್ರವೇಶ | 1 ಅಂಕ |
| | ಒಡಲು, ಸಮರ್ಥ ವಿವರಣೆಯೊಂದಿಗೆ ವಿಷಯಕ್ಕೆ | 2 ಅಂಕಗಳು |
| | ಉಪಸಂಹಾರ / ಮುಕ್ತಾಯ / ವಿಷಯ ಸಮಾಪ್ತಿ | 1 ಅಂಕ |
| | ಭಾಷಾಶೈಲಿಗೆ, ಪದಬಂಧ | 1 ಅಂಕ |
| | ಒಟ್ಟು | 5 ಅಂಕಗಳು |